ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 212 RNI Number : KNKAN/25/A2770 12-08-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :212 ರಾಯಚೂರು 12-08-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಕನ್ನಡಪರ ಸಂಘಟನೆಗಳ ಕರ್ನಾಟಕ ಬಂದ್ ಗೊಂದಲ

ಬೆಂಗಳೂರು,ಆ.11-

ತಮಿಳುನಾಡಿಗೆ ಕಾವೇರಿ ನೀರು ಹರಿಸುವ ಹಿನ್ನೆಲೆಯಲ್ಲಿ ಕರ್ನಾಟಕ ಬಂದ್‌ಗೆ ಕರೆ ಕೊಟ್ಟಿದ್ದ ಕನ್ನಡಪರ ಸಂಘಟನೆಗಳಲ್ಲಿ ಒಮತದ ಕೊರತೆ ಕಂಡುಬಂದಿದೆ. ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುವ ತೀರ್ಪಿನ ವಿರುದ್ಧ ಇದೇ 13ರಂದು ಕನ್ನಡಪರ ಚಳುವಳಿ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ಅಖಿಲ ಕರ್ನಾಟಕ ಬಂದ್‌ಗೆ ಕರೆ ನೀಡಲಾಗಿತ್ತು.

ಕಾವೇರಿ ಜಲಾಯನ ಪ್ರದೇಶದಲ್ಲಿ ಮಳೆ ಕೊರತೆ ಉಂಟಾಗಿ ಆ ಭಾಗದ ಜಲಾಶಯಗಳಲ್ಲಿ ನೀರಿನ ಕೊರತೆ ಇತ್ತು. ನಂತರದ ಬೆಳವಣಿಗೆಯಲ್ಲಿ ಜಲಾನಯನ ಪ್ರದೇಶದಲ್ಲಿ ಮಳೆಯಾಗಿ ಜಲಾಶಯಗಳಿಗೆ ನೀರು ಹರಿದುಬಂದು ತಮಿಳು ನಾಡಿಗೆ ನೀರನ್ನು ಬಿಡಲಾಗಿತ್ತು.

ಈ ಹಿನ್ನೆಲೆಯಲ್ಲಿ ಕರ್ನಾಟಕ ಬಂದ್ ಆಚರಣೆ ಬಗ್ಗೆ ಕನ್ನಡಪರ ಸಂಘಟನೆಗಳಲ್ಲಿ ಗೊಂದಲ ಉಂಟಾಗಿದೆ. ಆ.13ರಂದು ನಿಗದಿಯಂತೆ ಬಂದ್ ಆಚರಣೆ ಮಾಡೇ ಮಾಡುತ್ತೇವೆ ಎಂದು ವಾಟಾಳ್ ನಾಗರಾಜ್ ಅವರು ಖಂಡಾತುಂಡವಾಗಿ ಹೇಳಿದ್ದಾರೆ. ಆದರೆ ಕನ್ನಡಪರ ಸಂಘಟನೆಗಳ ಮುಖಂಡರಾದ ಪ್ರವೀಣ್‌ಕುಮಾರ್ ಶೆಟ್ಟಿ, ಶಿವರಾಮೇಗೌಡ, ಸಾ.ರಾ.ಗೋವಿಂದು ಮತ್ತಿತರರು ಸದ್ಯದ ಪರಿಸ್ಥಿತಿಯಲ್ಲಿ ಬಂದ್ ಮಾಡುವುದು ಬೇಡ ಎಂಬ ತೀರ್ಮಾನಕ್ಕೆ ಬಂದಿದ್ದಾರೆ ಎನ್ನಲಾಗಿದೆ.

ಈಗಾಗಲೇ ಜಲಾನಯನ ಪ್ರದೇಶದಲ್ಲಿ ಮಳೆಯಾಗಿ ತಮಿಳುನಾಡಿಗೆ ನಾಲ್ಕೂವರೆ ಟಿಎಂಸಿ ನೀರು ಬಿಡಲಾಗಿದೆ. ಜಲಾಶಯಗಳಲ್ಲಿ ಸ್ವಲ್ಪ ಪ್ರಮಾಣದ ನೀರು ಸಂಗ್ರಹವಾಗಿದೆ. ಇಂತಹ ಸಂದರ್ಭದಲ್ಲಿ ನಾವು ಬಂದ್ ಮಾಡುವುದು ಸಮಂಜಸವೇ ಎಂದು ಹೋರಾಟಗಾರರು ಚರ್ಚೆ ನಡೆಸಿದ್ದಾರೆ.

ಬಂದ್‌ಗೆ ಬೆಂಬಲ ನೀಡುವಂತೆ ಹೋಟೆಲ್ ಮಾಲೀಕರ ಸಂಘವಾಗಲಿ, ಇನ್ನಿತರ ಸಂಘವಾಗಲಿ ಈವರೆಗೆ ಬಂದ್ ಆಯೋಜಕರು ಪತ್ರ ಬರೆದು ಮನವಿ ಮಾಡಿಲ್ಲ ಎಂದು ತಿಳಿದುಬಂದಿದೆ.

ಬಂದ್ ಹಿನ್ನೆಲೆಯಲ್ಲಿ ಮುಂದಿನ ಹೋರಾಟದ ರೂಪುರೇಷೆ ಹಾಗೂ ಮುಂದಿನ ಕಾರ್ಯಕ್ರಮಗಳ ಬಗ್ಗೆ ಚರ್ಚಿಸಲು ನಾಳೆ ಬೆಳಗ್ಗೆ ಪ್ರವೀಣ್ ಕುಮಾರ್ ಶೆಟ್ಟಿ ನೇತೃತ್ವದ ಕರವೇ ಬಣ ಸಭೆ ಕರೆದಿದೆ.

ವಾಟಾಳ್ ನೇತೃತ್ವದಲ್ಲಿ ಈಗಾಗಲೇ ಮೈಸೂರು, ಮಂಡ್ಯ, ಅತ್ತಿಬೆಲೆ ಗಡಿಯಲ್ಲಿ ಪ್ರತಿಭಟನೆಗಳನ್ನು ನಡೆಸಲಾಗಿದ್ದು, ಬಂದ್ ನಡೆಸಲು ತಯಾರಿ ಮಾಡಿಕೊಳ್ಳಲಾಗಿದೆ.

ಬಂದ್ ಯಾವ ಸ್ವರೂಪವಿರುತ್ತದೆ? ಹೋರಾಟಗಾರರು ಯಾವ ರೀತಿ ಪ್ರತಿಭಟನೆ ನಡೆಸಲಿದ್ದಾರೆ? ಬಂದ್ ಮಾಡುತ್ತಾರೆಯೇ? ಅಥವಾ ಹಿಂದೆ ಸರಿಯಲಿದ್ದಾರೆಯೇ? ಬಂದ್ ಬದಲು ಬೇರೆಯ ರೀತಿಯ ಹೋರಾಟ ಮಾಡಲಿದ್ದಾರೆಯೇ ಎಂಬ ಬಗ್ಗೆ ಕಾದು ನೋಡಬೇಕು.



1,050 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಶಿವರಾಜ್ ಜಾನೇಕಲ್

ರಾಯಚೂರು: ಶಿಕ್ಷಣದಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ (ರಿ.) ಸಿಂಧನೂರು ಹಾಗೂ ಮಸ್ಕಿ ತಾಲೂಕು ಸಮಿತಿಗಳ ವತಿಯಿಂದ ಆ.15ರಂದು ಸಿಂಧನೂರಿನಲ್ಲಿ ಬೃಹತ್ ಪ್ರತಿಭಾ ಪುರಸ್ಕಾರ ಸಮಾರಂಭ ಆಯೋಜಿಸಲಾಗಿದೆ ಎಂದು ಮಹಾಸಭಾದ ರಾಯಚೂರು ಜಿಲ್ಲಾಧ್ಯಕ್ಷ ಶಿವರಾಜ್ ಜಾನೇಕಲ್ ತಿಳಿಸಿದ್ದಾರೆ.



ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ನೀಟ್ ಪರೀಕ್ಷೆಯಲ್ಲಿ ಉತ್ತಮ ರ್‍ಯಾಂಕ್ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು ಎಂದರು.

ಆ.15ರಂದು ಬೆಳಗ್ಗೆ 10.30ಕ್ಕೆ ಸಿಂಧನೂರಿನ ಬೌನ್ ಹಾಲ್‌ನಲ್ಲಿ ಕಾರ್ಯಕ್ರಮ ನಡೆಯಲಿದ್ದು, ಈಗಾಗಲೇ 1,050 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಸಿಂಧನೂರು ಮತ್ತು ಮಸ್ಕಿ ತಾಲೂಕುಗಳಿಗೆ ಮಾತ್ರ ಸೀಮಿತವಾಗದೆ, ರಾಯಚೂರು ಜಿಲ್ಲೆಯ ಇತರೆ ತಾಲೂಕುಗಳಲ್ಲಿರುವ ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ಅರ್ಹ ವಿದ್ಯಾರ್ಥಿಗಳಿಗೂ ಕಾರ್ಯಕ್ರಮದಲ್ಲಿ ಭಾಗವಹಿಸಿ ಪುರಸ್ಕಾರ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಗುರುತಿಸಿ ಗೌರವಿಸುವುದು ಹಾಗೂ ಮುಂದಿನ ಶಿಕ್ಷಣಕ್ಕೆ ಅವರನ್ನು ಪ್ರೋತ್ಸಾಹಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ಹೆಚ್ಚಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಶಿವರಾಜ್ ಜಾನೇಕಲ್ ಹೇಳಿದರು.

''ಶಿಕ್ಷಣ ಎಂಬುದು ಹುಲಿಯ ಹಾಲಿದ್ದಂತೆ, ಅದನ್ನು ಕುಡಿದವನು ಘರ್ಜಿಸಲೇಬೇಕು'' ಎಂಬ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಂದೇಶವನ್ನು ವಿದ್ಯಾರ್ಥಿಗಳಲ್ಲಿ ಪ್ರೇರಣೆಯಾಗಿ ಮೂಡಿಸುವ ಉದ್ದೇಶವೂ ಕಾರ್ಯಕ್ರಮಕ್ಕಿದೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು, ವೈದ್ಯರು, ವಕೀಲರು, ಶಿಕ್ಷಣ ತಜ್ಞರು, ಜನಪ್ರತಿನಿಧಿಗಳು ಹಾಗೂ ಸಮಾಜದ ಮುಖಂಡರು ಭಾಗವಹಿಸಲಿದ್ದಾರೆ. ಬೆಂಗಳೂರಿನ ಡಾ. ಶಿವಕುಮಾರ ಮುಖ್ಯ ಭಾಷಣಕಾರರಾಗಿ ಭಾಗವಹಿಸಲಿದ್ದಾರೆ. ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಪ್ರಾಧ್ಯಾಪಕ ಡಾ. ನಾಗೇಶ್ ಬಸಪ್ಪ ನಾಯಕ ನಿರೂಪಣೆ ಮಾಡಲಿದ್ದಾರೆ.

ಅರ್ಹ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಯೋಜಕರನ್ನು ಸಂಪರ್ಕಿಸಬಹುದು. 8660571288, 9972608686,

3ನೇ ಪುಟಕ್ಕೆ

ಬೆಂಗಳೂರು-ಮುಂಬೈ ವಂದೇ ಭಾರತ ಸ್ಲೀಪರ್ ರೈಲು ಶೀಘ್ರದಲ್ಲೇ ಪ್ರಾರಂಭ- ಡಾ.ಬಾಬುರಾವ್

ರಾಯಚೂರು,ಆ.11-

ಬೆಂಗಳೂರು-ಮುಂಬೈ ವಂದೇ ಭಾರತ ಸ್ಲೀಪರ್ ರೈಲು ಶೀಘ್ರದಲ್ಲೇ ಪ್ರಾರಂಭವಾಗಲಿದೆ ಎಂದು ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ.ಬಾಬುರಾವ್ ತಿಳಿಸಿದ್ದಾರೆ.ಜಿಜಿಕೇಂದ್ರ ಸರ್ಕಾರ ಕರ್ನಾಟಕ ರಾಜ್ಯಕ್ಕೆ ಮತ್ತೊಂದು ವೇಗದ ರೈಲು ಸಂಪರ್ಕವನ್ನು ಕೊಡುಗೆ ನೀಡಲು ಮುಂದಾಗಿದ್ದು ಕಲ್ಯಾಣ ಕರ್ನಾಟಕ ಜನತೆಗೆ ಸಿಹಿ ಸುದ್ದಿ ನೀಡಿದೆ.

ದಕ್ಷಿಣ ಪಶ್ಚಿಮ ರೈಲ್ವೆ ವಂದೇ ಭಾರತ ಸ್ಲೀಪರ್ ರೈಲುಗಳ ಸಂಚಾರಕ್ಕೆ ಸಿದ್ಧತೆ ನಡೆಸಿದ್ದು ಬೆಂಗಳೂರು-ಮುಂಬೈ



ಮಾರ್ಗದಲ್ಲಿ ಶೀಘ್ರದಲ್ಲೇ ಪ್ರೀಮಿಯಂ ರಾತ್ರಿ ಸೇವೆ ಆರಂಭಿಸಲಿದೆ.

ಬೆಂಗಳೂರು ರೈಲು ನಿಲ್ದಾಣವನ್ನು ಸಂಜೆ 6ಗಂಟೆಗೆ ನಿರ್ಗಮಿಸುವ ಈ ರೈಲು ರಾತ್ರಿ 9.25ಕ್ಕೆ ಗುಂತಕಲ್,10.55ಕ್ಕೆ ರಾಯಚೂರು, ಮಧ್ಯ ರಾತ್ರಿ 12.40ಕ್ಕೆ ಕಲಬುರಗಿ,ತಡರಾತ್ರಿ 2.05ಕ್ಕೆ ಸೊಲ್ಲಾಪುರ, ಬೆಳಗಿನ ಜಾವ 5.50ಕ್ಕೆ ಪುಣೆ,ಬೆಳಿಗ್ಗೆ 8.30ಕ್ಕೆ ಮುಂಬೈ ತಲುಪಲಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ ಎಂದು ಅವರು ಹೇಳಿದ್ದಾರೆ.

ಈ ರೈಲು ಓಡಿಸುವಂತೆ ಈ ಭಾಗದ ಜನರ ಪರವಾಗಿ ರೈಲ್ವೆ ಸಚಿವರಲ್ಲಿ ಮಾಡಿಕೊಂಡ ಮನವಿಗೆ ಈಗ ಸ್ಪಂದನೆ ಸಿಕ್ಕಿದ್ದು ಸಂತಸ ತಂದಿದೆ ಎಂದು ಹರ್ಷ ವ್ಯಕ್ತಪಡಿಸಿರುವ ಅವರು ಕಲ್ಯಾಣ ಕರ್ನಾಟಕ ಜನತೆ ಇದರ ಪ್ರಯೋಜನ ಪಡೆಯಲು ಕೋರಿದ್ದಾರೆ.

ಭೂಮಾನಂದ ಬರ್ಬರ ಹತ್ಯೆ ಖಂಡಿಸಿ ಬೃಹತ್ ಪ್ರತಿಭಟನೆ: ಹಂತಕರಿಗೆ ಕಠಿಣ ಶಿಕ್ಷೆಗೆ ಆಗ್ರಹ





ಸಿರವಾರ,ಆ.11-

ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಯುವಕ ಹಾಗೂ ಬಹುಜನ ಸಮಾಜ ಪಕ್ಷದ (ಬಿ.ಎಸ್.ಪಿ.) ರಾಯಚೂರು ಜಿಲ್ಲಾ ಉಸ್ತುವಾರಿ ಶ್ರೀ ಭೂಮಾನಂದ ಅವರ ಬರ್ಬರ ಹತ್ಯೆಯನ್ನು ಖಂಡಿಸಿ, ಕರ್ನಾಟಕ ದಲಿತ ಸಂಘರ್ಷ ಸಮಿತಿಗಳ ಒಕ್ಕೂಟದ ವತಿಯಿಂದ ಇಂದು ಸಿರವಾರ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಮಾನ್ಯ ತಹಶೀಲ್ದಾರ ಆಶೋಕ ಪವಾರ್ ಅವರ ಮುಖಾಂತರ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಪಟ್ಟಣದ ಬಸವ ವೃತ್ತದಿಂದ ಬಸ್ ನಿಲ್ದಾಣದಲ್ಲಿ ಸಲ್ಲಿಸಿದ ಮನವಿಯಲ್ಲಿ ಭೂಮಾನಂದ ಅವರು ತಮ್ಮ ಸ್ವಂತ ಪರಿಶ್ರಮದಿಂದ ಆರ್ಥಿಕವಾಗಿ ಸಬಲರಾಗುತ್ತಾ, ಬಡವರಿಗೆ ಮತ್ತು ಕಷ್ಟದಲ್ಲಿದ್ದವರಿಗೆ ಸದಾ ಸಹಾಯ ಹಸ್ತ ಚಾಚುತ್ತಾ ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಇವರ ಜನಪ್ರಿಯತೆ ಹಾಗೂ ಸಾಮಾಜಿಕ ಏಳಿಗೆಯನ್ನು ಸಹಿಸದ ಅದೇ ಗ್ರಾಮದ ದೇವರಾಜ ಮತ್ತು ಆತನ ಸಹಚರರು ದಿ: 04ರಂದು ಸುಂಕೇಶ್ವರಹಾಳ ಗ್ರಾಮದ ಜನನಬಿಡ ನಡು ರಸ್ತೆಯಲ್ಲಿ ಹೊಂಚು ಹಾಕಿ ದುಷ್ಟ ಕೂಟದೊಂದಿಗೆ ಬರ್ಬರವಾಗಿ ಹತ್ಯೆಗೈದಿರುತ್ತಾರೆ. ಈ ಅಮಾನವಿಯ ಕೃತ್ಯವನ್ನು ದಲಿತ ಸಂಘರ್ಷ ಸಮಿತಿಗಳ ಒಕ್ಕೂಟವು ತೀವ್ರವಾಗಿ ಖಂಡಿಸಿದೆ.

ಹತ್ಯೆ ಪ್ರಕರಣವನ್ನು ಕೂಡಲೇ ಉನ್ನತ ಮಟ್ಟದ ತನಿಖೆಗೆ ಒಳಪಡಿಸಿ, ಕೃತ್ಯದಲ್ಲಿ ಭಾಗಿಯಾದ ನೇರ ಆರೋಪಿಗಳು ಹಾಗೂ ಇದರ ಹಿಂದೆ ಇರುವ ಎಲ್ಲ ಸಂಚುಕೋರರನ್ನು ಕೂಡಲೇ ಬಂಧಿಸಬೇಕು, ಮತ್ತು ಮೃತ ಭೂಮಾನಂದ ಅವರ ಕುಟುಂಬಕ್ಕೆ ಸರ್ಕಾರದಿಂದ 50 ಲಕ್ಷ ರೂಪಾಯಿಗಳ ಪರಿಹಾರ ಧನವನ್ನು ತಕ್ಷಣ ಬಿಡುಗಡೆ ಮಾಡಬೇಕು, ಸಂತ್ರಸ್ತ ಕುಟುಂಬದ ಜೀವನ ನಿರ್ವಹಣೆಗಾಗಿ 10 ಎಕರೆ ಕೃಷಿ ಜಮೀನು ಮತ್ತು ಹತ್ಯೆಗೀಡಾದ ಮೃತ ಭೂಮಾನಂದ ಅವರ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಬೇಕು, ಈ ಪ್ರಕರಣದ ವಿಚಾರಣೆಯನ್ನು ತ್ವರಿತಗತಿಯ ನ್ಯಾಯಾಲಯದ ಮುಖಾಂತರ ನಡೆಸಿ, ತಪ್ಪಿತಸ್ಥರಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಮತ್ತು ರಾಜ್ಯದಲ್ಲಿ ದಲಿತ ಮುಖಂಡರು ಮತ್ತು ಸಾಮಾಜಿಕ ಕಾರ್ಯಕರ್ತರಿಗೆ ಇರುವ ಜೀವ ಬೆದರಿಕೆಗಳನ್ನು ಗುರುತಿಸಿ ಸೂಕ್ತ ಪೊಲೀಸ್ ಭದ್ರತೆ ಒದಗಿಸಬೇಕು. ದಲಿತರ ಮೇಲೆ ನಡೆಯುವ ಯಾವುದೇ ದೌರ್ಜನ್ಯ ಮತ್ತು ಹತ್ಯೆಗಳ ವಿರುದ್ಧ ಸಮಿತಿಯು ರಾಜಿಯಿಲ್ಲದೆ ಹೋರಾಟ ಮುಂದುವರಿಸಲಿದೆ ಎಂದು ಎಚ್ಚರಿಸುತ್ತಾ, ಸರ್ಕಾರವು ಈ ಪ್ರಕರಣದಲ್ಲಿ ತಕ್ಷಣ ನ್ಯಾಯಯುತ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಗಳ ಒಕ್ಕೂಟ, ಸಿರವಾರ ಬಲವಾಗಿ ಆಗ್ರಹಿಸಿತು. ಈ ಬೃಹತ್ ಪ್ರತಿಭಟನೆಗೆ ಸೂಕ್ತ ಪೋಲಿಸ್ ಬಂದೋಬಸ್ತ ಪಿಎಸ್ ಐ ಚಂದ್ರಶೇಖರ್ ಹಿರೇಮಠ ವಹಿಸಿದ್ದರು.

ಈ ಸಂದರ್ಭದಲ್ಲಿ ದಲಿತ ಸಮುದಾಯದ ಹಿರಿಯ ಮುಖಂಡರಾದ ಎಂ. ಬಸವರಾಜ ಭಂಡಾರಿ, ಬಡ್ಡ ಹನುಮಂತಪ್ಪ, ರಾಜಪ್ಪ ಹೊನ್ನಟಗಿ, ಅರಳಪ್ಪ ಯದ್ದಲದಿನ್ನಿ, ಮಲ್ಲಪ್ಪ ದೊಡ್ಮನೆ, ಜೆ. ಅಬ್ರಾಹಂ ಹೊನ್ನಟಗಿ, ಜಯಪ್ಪ ಗುತ್ತೆದಾರ್, ಎಂ. ಮನೋಹರ, ವಿಜಯರಾಣಿ, ದಾನಪ್ಪ, ಹನುಮಂತ ಕೋಟೆ, ಎಲ್.ವಿ ಸುರೇಶ್, ಯಲ್ಲಪ್ಪ ಆಲ್ದರ್ಥಿ, ರಾಮಯ್ಯ ಬೈನರ್ ಹುಲಿಗಪ್ಪ ಕರಿಬಿಲ್ಕರ್ ಡಿ.ಹೆಚ್ ಭೀಮಣ್ಣ, ಚನ್ನಪ್ಪ ಬೂದಿನಾಳ, ಯೇಸುಮಿತ್ರ ಮಚ್ಚಿ, ಮೇಶಕ್ ಕೆಂಪು, ಮಾರೇಶ ಭಂಡಾರಿ, ಜೆ. ಪ್ರಕಾಶ, ಹನುಮೇಶ ಬೇರಿ, ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಸಿಂಧನೂರು ತಾಲೂಕಿನ ಸಾರ್ವಜನಿಕರಿಗೆ ಗುಣಮಟ್ಟದ ಹಾಗೂ ಸಮಯೋಚಿತ ಆರೋಗ್ಯ ಸೇವೆ ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿ. ಎಂಎಲ್ಸಿ . ಬಸನಗೌಡ ಬಾದರ್ಲಿ

ಸಿಂಧನೂರು :ಆಗಸ್ಟ್ :10 : ಸಿಂಧನೂರು ತಾಲೂಕಿನ ಸಾರ್ವಜನಿಕರ ಆರೋಗ್ಯ ಕಾಪಾಡುವುದು. ಹಾಗೂ ಗುಣಮಟ್ಟದ ಗುಣಮಟ್ಟದ ಚಿಕಿತ್ಸೆ ಗಾಗಿ. ಸಮಯೋಚಿತ ಆರೋಗ್ಯ ಸೇವೆಯನ್ನು ಒದಗಿಸುವುದು. ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಎಂದು ವಿಧಾನ ಪರಿಷತ್ ಶಾಸಕ ಬಸನಗೌಡ ಬಾದರ್ಲಿ ಹೇಳಿದರು. ಅವರಿಂದು ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ. ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳೊಂದಿಗೆ ಸಭೆ ನಡೆಸಿ. ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ದೊರೆಯುತ್ತಿರುವ ಆರೋಗ್ಯ ಸೇವೆಗಳ ಕುರಿತು ಸಮಗ್ರವಾಗಿ ಪರಿಶೀಲನೆ ನಡೆಸಿದರು. ಮಾನ್ಯ ಮುಖ್ಯಮಂತ್ರಿಗಳ ಆದೇಶದಂತೆ. ವೈದ್ಯರು ಹಾಗೂ ಸಿಬ್ಬಂದಿ ನಿಗದಿತ ಸಮಯಕ್ಕೆ. ಸರಿಯಾಗಿ ಕರ್ತವ್ಯಕ್ಕೆ ಹಾಜರಾಗಬೇಕು. ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ. ಉತ್ತಮ ಆರೋಗ್ಯ ಸೇವೆ ನೀಡಬೇಕು. ಆಸ್ಪತ್ರೆಯಲ್ಲಿ. ರೋಗಿಗಳ ಆರೋಗ್ಯದ ಜೊತೆ ಯಾವುದೇ ತರಹದ ನಿರ್ಲಕ್ಷ ಧೋರಣೆ. ಮತ್ತು ಭ್ರಷ್ಟಾಚಾರಕ್ಕೆ ಯಾವುದೇ ಅವಕಾಶ ನೀಡದೆ ಭ್ರಷ್ಟಾಚಾರ ಮುಕ್ತ. ಹಾಗೂ ಪಾರದರ್ಶಕ ಸೇವೆಯನ್ನು ಒದಗಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಆಸ್ಪತ್ರೆಯಲ್ಲಿ ಅಗತ್ಯ ಔಷಧಗಳ ಕೊರತೆಯಾಗದಂತೆ ಮುನ್ನೆಚ್ಚರಿಕೆವಹಿಸಿ. ಔಷಧಿಗಳ ಲಭ್ಯತೆ ಕುರಿತು ನಿರಂತರ ನಿಗಾವಹಿಸಬೇಕು. ಸಿಬ್ಬಂದಿ ಕೊರತೆಯಿಂದ ಸಾರ್ವಜನಿಕರಿಗೆ ಹಾಗೂ ರೋಗಿಗಳಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಂಡು. ಸಿಬ್ಬಂದಿ ಕೊರತೆಯನ್ನು ಶೀಘ್ರವಾಗಿ ಸರಿಪಡಿಸಿಕೊಳ್ಳುವಂತೆ ಸೂಚಿಸಿದರು. ಅದೇ ರೀತಿ. ಆಸ್ಪತ್ರೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ವೇತನ ಪಾವತಿಯಾಗದೇ ಇರುವುದನ್ನು ಗಮನಿಸಿ. ಬಾಕಿ ಇರುವ ವೇತನವನ್ನು ಕೂಡಲೇ ಪಾವತಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಾರ್ವಜನಿಕ ಆಸ್ಪತ್ರೆ ಬಡವರು ಹಾಗೂ ಸಾಮಾನ್ಯ ಜನರಿಗೆ ಪ್ರಮುಖ ಆರೋಗ್ಯ ಸೇವಾ ಕೇಂದ್ರವಾಗಿದ್ದು. ಇಲ್ಲಿ ಯಾವುದೇ ರೀತಿಯ

3ನೇ ಪುಟಕ್ಕೆ

ಶ್ರೀ ಮಾತೆ ಬಾಲಮಾರಮ್ಮ ದೇವಸ್ಥಾನದ ಅಭಿವೃದ್ಧಿಗೆ 40 ಲಕ್ಷ ಅನುದಾನ-ಎ.ವಸಂತ ಕುಮಾರ

ರಾಯಚೂರು,ಆ.11-

ಇಂದು ಬೆಳಿಗ್ಗೆ ಶ್ರೀ ಬಾಲ ಮಾರಮ್ಮ ದೇವಸ್ಥಾನ ಸಮಿತಿಯವರ ವಿಶೇಷ ಆಹ್ವಾನದ ಮೇರೆಗೆ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ಬಾಲಮಾರಮ್ಮ ದೇವಿಯ ಆಶೀರ್ವಾದ ಸ್ವೀಕರಿಸಿ ಮಹಾತಾಡಿ ಸಮಿತಿಯವರ ವಿನಂತಿಯ ಮೇರೆಗೆ ದೇವಸ್ಥಾನದ ಅಭಿವೃದ್ಧಿಗೆ 2026-27 ನೇ ಸಾಲಿನ ಎಂ. ಎಲ್. ಸಿ ಸ್ಥಳೀಯ ಪ್ರದೇಶಭಿವೃದ್ದಿ ಯೋಜನೆಯಡಿಯಲ್ಲಿ ದೇವಸ್ಥಾನದ ಅಭಿವೃದ್ದಿಗೆ 40 ಲಕ್ಷ ಅನುಧಾನದ ನೀಡಿದರು. ಈ ಸಂದರ್ಭದಲ್ಲಿ ದೇವಸ್ಥಾನಕ್ಕೆ ಅನುಧಾನ ನೀಡಿದ್ದಕ್ಕೆ ದೇವಸ್ಥಾನ ಸಮಿತಿ ಅಧ್ಯಕ್ಷರು ಸಮಿತಿ ಸದಸ್ಯರು ವಿಧಾನ ಪರಿಷತ ಸದಸ್ಯರನ್ನು ಸನ್ಮಾನಿಸಿ ಅಭಿನಂದನೆಗಳನ್ನು ತಿಳಿಸಿದರು.ಈ ಸಂದರ್ಭದಲ್ಲಿ ಕೆ ಟಿ ನರಸಣ್ಣ ಅಧ್ಯಕ್ಷರು ಬಾಲ ಮಾರಮ್ಮ ದೇವಸ್ಥಾನ ಸಮಿತಿ, ಡಿ ಕೆ ಮುರುಳಿ ಯಾದವ್, ತಿಮ್ಮಪ್ಪ ಕೋರ್ಟ್, ಬಂಕ ಶಿವಪ್ಪ, ಪ್ರಕಾಶ್ ವಕೀಲರು, ಬಿದಾಲ್ ಶ್ರೀನಿವಾಸ್, ಸುರೇಂದ್ರ, ಮಾರಪ್ಪ ಸೆಂಟ್ರಿಂಗ್, ಬಂಕ ರಾಮು, ತಲಾರ್ ಶಂಕರ್, ಟೈಲರ್ ಹಣಮಂತು, ಡಾ, ನಾಗೇಶ್, ಮೇಸ್ತ್ರಿ ಹನಮಂತು,ಹಾಲ್ವಿ ನರಸಿಂಹುಲು, ನರಸಪ್ಪ ತಲಾರ್, ತಲಕಾಯಿ ನರಸಿಮುಲು, ವೀರೇಶ್ ತಲಾರ್ ಪೂಜಾರಿ, ಮಾಸ್ಟರ್ ಮಲ್ಲಯ್ಯ ಮುಂತಾದವರು ಹಾಜರಿದ್ದರು.



ಎಸ್‌ಐಆರ್ ವೇಳಾಪಟ್ಟಿ ಮರು ನಿಗದಿ, ಗಣತಿ ನಮೂನೆಗಳ ಭರ್ತಿಗೆ ಆ. 17ರವರೆಗೆ ಅವಕಾಶ: ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ



ಕೊಪ್ಪಳ ಆ.11

ಕರ್ನಾಟಕದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ರಮದ ವೇಳಾಪಟ್ಟಿಯನ್ನು ಭಾರತ ಚುನಾವಣಾ ಆಯೋಗವು ಪರಿಷ್ಕರಿಸಿ ಮರು ನಿಗದಿಪಡಿಸಿದ್ದು, ಗಣತಿ ನಮೂನೆಗಳನ್ನು ಭರ್ತಿ ಮಾಡಿ ಸಲ್ಲಿಸಲು ಆಗಸ್ಟ್ 17ರವರೆಗೆ ಅವಕಾಶವಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಕುರಿತು ಸೋಮವಾರ (ಆ. 10ರಂದು) ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡಿದರು.

ಮರುನಿಗದಿತ ಪರಿಷ್ಕರಣೆ ವೇಳಾಪಟ್ಟಿಯಂತೆ ಬಿಎಲ್‌ಒ.ಗಳಿಂದ ಮನೆ ಮನೆ ಭೇಟಿ ಮತ್ತು ಮತಗಟ್ಟೆಗಳ ರ‍್ಯಾಷನಲೈಜೆಷನ್ ಆಗಸ್ಟ್ 17ರವರೆಗೆ ನಡೆಯಲಿದ್ದು, ಆ. 24ರಂದು ಕರಡು ಮತದಾರರ ಪಟ್ಟಿ ಪ್ರಕಟಣೆಯಾಗಲಿದೆ. ಆ. 24 ರಿಂದ ಸೆಪ್ಟೆಂಬರ್ 23ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿದೆ. ಆ. 24 ರಿಂದ ಅಕ್ಟೋಬರ್ 22ರವರೆಗೆ ನೋಟಿಸ್ ಅವಧಿ ಮತ್ತು ಹಕ್ಕು-ಆಕ್ಷೇಪಣೆಗಳ ವಿಲೇವಾರಿ ನಡೆಯಲಿದ್ದು, ಅಕ್ಟೋಬರ್ 27ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆಯಾಗಲಿದೆ. ಜಿಲ್ಲೆಯ ನಾಗರಿಕರು ಹಾಗೂ ಮತದಾರರು ಈ ನಿಗದಿತ ಅವಧಿಯಲ್ಲಿ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಸಿಕೊಳ್ಳಬೇಕು ಎಂದರು.

ಎಸ್‌ಐಆರ್ ಪ್ರಕ್ರಿಯೆಗೆ ಉತ್ತಮ ಸಹಕಾರ: ಕೊಪ್ಪಳ ಜಿಲ್ಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯು ಸುಗಮವಾಗಿ ಮತ್ತು ಶಾಂತಿಯುತವಾಗಿ ಸಾಗುತ್ತಿದ್ದು, ಒಟ್ಟು ಹಂಚಿಕೆ ಮಾಡಲಾದ 11,90,214 ಗಣತಿ ನಮೂನೆಗಳಲ್ಲಿ ಇಲ್ಲಿಯವರೆಗೆ 10,41,046 ನಮೂನೆಗಳನ್ನು ಯಶಸ್ವಿಯಾಗಿ ಡಿಜಿಟಲೀಕರಣ ಮಾಡಲಾಗಿದೆ. ಈ ಪ್ರಕ್ರಿಯೆಗೆ ಜಿಲ್ಲೆಯ ಮತದಾರರು, ರಾಜಕೀಯ ಪಕ್ಷಗಳು, ಮಾಧ್ಯಮ ಹಾಗೂ ಸಾಮಾಜಿಕ ಮಾಧ್ಯಮಗಳ ಮೂಲಕ ಉತ್ತಮ ಸಹಕಾರ ದೊರೆಯುತ್ತಿದೆ ಎಂದು ಹೇಳಿದರು.

ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಿಗದ ಮತದಾರರನ್ನು ಅಬ್ಸೆಂಟ್, ಶಿಫ್ಟೆಡ್, ಡೆಡ್, ಡುಪ್ಲಿಕೇಟ್, ಅದರ್ ಎಂದು ಗುರುತಿಸಲಾಗಿದ್ದು, ಇದರಲ್ಲಿ ಕೊಪ್ಪಳ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಒಟ್ಟು 1,49,168 ಮತದಾರರ (ಎ.ಎಸ್.ಡಿ.ಡಿ.ಒ) ಪಟ್ಟಿಯನ್ನು ಜಿಲ್ಲಾ ವೆಬ್‌ಸೈಟ್‌ನಲ್ಲಿ : ಪ್ರಚುರಪಡಿಸಲಾಗಿರುತ್ತದೆ ಹಾಗೂ ಪ್ರತಿ ವಿಧಾನಸಭಾ ಕ್ಷೇತ್ರದ ಮತಗಟ್ಟೆವಾರು ಮತದಾರರ ವಿವರವನ್ನು ಎಲ್ಲಾ ರಾಜಕೀಯ ಪಕ್ಷದ ಪ್ರತಿನಿಧಿಗಳಿಗೆ ನೀಡಲಾಗುತ್ತಿದೆ ಎಂದರು.

ದಿನಾಂಕ:26.07.2026 ರಿಂದ ಇಲ್ಲಿಯವರೆಗೆ ಎ.ಎಸ್.ಡಿ.ಡಿ.ಒ ಎಂದು ಗುರುತು ಮಾಡಲಾದ ಮತದಾರರುಗಳ ಪೈಕಿ ಒಟ್ಟು 10,958 ಮತದಾರರ ಗಣತಿ ನಮೂನೆಗಳನ್ನು ಮತದಾರರ ನೋಂದಣಾಧಿಕಾರಿಗಳು ರೋಲ್ ಬ್ಯಾಕ್ ಮಾಡಿದ್ದು, ಈ ಕಾರ್ಯವು ಆಗಸ್ಟ್ 17 ರವರೆಗೆ ನಡೆಯಲಿದೆ. ಅರ್ಹ ಮತದಾರರ ಗಣತಿ ನಮೂನೆಗಳನ್ನು ಡಿಜಿಟಲೀಕರಣ ಮಾಡಲು ಕ್ರಮ ಕೈಗೊಳ್ಳಲಾಗುವುದು. ಈ ಕುರಿತು ಜಿಲ್ಲೆಯ ಎಲ್ಲಾ ನೋಂದಾಯಿತ ಹಾಗೂ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳ ಎ.ಎಸ್.ಡಿ.ಡಿ.ಒ ಪಟ್ಟಿಯನ್ನು ನೀಡಲಾಗಿದ್ದು, ಅವರು ಸಹ ತಮ್ಮ ಬೂತ್ ಮಟ್ಟದ ಏಜೆಂಟರುಗಳ ಸಹಾಯದಿಂದ ಪರಿಶೀಲಿಸಿ ಆಕ್ಷೇಪಣೆಯನ್ನು ಸಂಬಂಧಪಟ್ಟ ಮತದಾರರ ನೋಂದಣಾಧಿಕಾರಿಗಳು ಅಥವಾ ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ಸಲ್ಲಿಸಬಹುದು ಎಂದು ತಿಳಿಸಿದೆ.

ಕೊಪ್ಪಳ ಜಿಲ್ಲೆಗೆ ಸಂಬಂಧಿಸಿದಂತೆ, ದಿನಾಂಕ:10.08.2026 ರವರೆಗೆ ಒಟ್ಟು 1,315 ಬೂತ್ ಮಟ್ಟದ ಅಧಿಕಾರಿಗಳ ಹಾಗೂ ಬೂತ್ ಮಟ್ಟದ ಏಜೆಂಟರುಗಳ ಸಭಾ ನಡವಳಿಗಳನ್ನು ಬಿಎಲ್‌ಒ ಆ್ಯಪ್ ನಲ್ಲಿ ಅಪ್ಡೇಟ್ ಮಾಡಲಾಗಿರುತ್ತದೆ. ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಬೂತ್ ಮಟ್ಟದ ಏಜೆಂಟರಗಳು ಸಭೆಯನ್ನು ಪುನಃ ಪುನಃ ಮಾಡುವುದರಿಂದ ಆ ಭಾಗದಲ್ಲಿ ಬರುವ ಎ.ಎಸ್.ಡಿ.ಡಿ.ಒ ಮತದಾರರುಗಳ ಸಂಖ್ಯೆಯನ್ನು ಕಡಿಮೆಗೊಳಿಸಬಹುದಾಗಿದೆ ಮತ್ತು ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಮುಂದುವರಿಸಲು ಸಹಕಾರಿಯಾಗುತ್ತದೆ. ಕೊಪ್ಪಳ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಿಗೆ 1315 ಮತಗಟ್ಟೆಗಳ ಪೈಕಿ 1200 ಕ್ಕಿಂತ ಹೆಚ್ಚು ಮತದಾರರನ್ನು ಹೊಂದಿರುವ ಮತಗಟ್ಟೆಗಳಿಗೆ ಪ್ರತ್ಯೇಕ ಹೆಚ್ಚುವರಿಯಾಗಿ 37 ಮತಗಟ್ಟೆಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ ಎಂದರು.

ಮತದಾರರ ಪಟ್ಟಿಯಲ್ಲಿ ಹೆಸರಿದ್ದು, ಅಬ್ಸೆಂಟ್ ಅಥವಾ ಶಿಫ್ಟೆಡ್ ಪಟ್ಟಿಯಲ್ಲಿ ಹೆಸರು ಬಂದಿರುವವರು, ತಮ್ಮ ತಾಲ್ಲೂಕಿನ ತಹಶಿಲ್ದಾರರು, ಮತದಾರರ ನೋಂದಣಾಧಿಕಾರಿ ಅಥವಾ ಜಿಲ್ಲಾಧಿಕಾರಿ ಕಚೇರಿಯನ್ನು ಸಂಪರ್ಕಿಸಿ ನಮೂನೆ ಭರ್ತಿ ಮಾಡಿ ನೀಡಲು ಅವಕಾಶವಿದೆ. ಅಲ್ಲದೇ ಅಕ್ಟೋಬರ್ ವೇಳೆಗೆ 18 ವರ್ಷ ತುಂಬುವ ಯುವಕ-ಯುವತಿಯರು ಹಾಗೂ ಮತದಾರರ ಪಟ್ಟಿಯಿಂದ ಹೊರಗುಳಿದವರು 'ನಮೂನೆ 6' ಸಲ್ಲಿಸಿ ಹೆಸರು ಸೇರಿಸಲು ವಿಶೇಷ ನೋಂದಣಿ ಅಭಿಯಾನ ಮತ್ತು ಕ್ಯಾಂಪ್‌ಗಳನ್ನು ಆಯೋಜಿಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಹೇಳಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಚುನಾವಣಾ ತಹಶಿಲ್ದಾರರ ರವಿ ವಸ್ತ್ರದ್ ಸೇರಿದಂತೆ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳು, ಜಿಲ್ಲಾ ಚುನಾವಣಾ ಶಾಖೆಯ ಶಿರಸ್ತೆದಾರರು ಹಾಗೂ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

ಆಗಸ್ಟ್ 16 ರಂದು ಕೊಪ್ಪಳ ತಾಲ್ಲೂಕಿನ ಹಟ್ಟಿ ಗ್ರಾಮದಲ್ಲಿ ರಾಜ್ಯ ಮಟ್ಟದ ಕಾರ್ಯಕ್ರಮ

ಸಂಯಮ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಸಿದ್ರಾಮೇಶ್ವರ



ಕೊಪ್ಪಳ ಆ.11-

ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು ಇವರ ವತಿಯಿಂದ ನೀಡಲಾಗುವ ಪ್ರತಿಷ್ಠಿತ ಸಂಯಮ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಕೊಪ್ಪಳ ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೊಪ್ಪಳ ಜಿಲ್ಲೆಯಲ್ಲಿ ರಾಜ್ಯ ಮಟ್ಟದ ಸಂಯಮ ಪ್ರಶಸ್ತಿ-2026 ಪ್ರದಾನ ಸಮಾರಂಭ ನಡೆಯಲಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಸೋಮವಾರ (ಆ. 10ರಂದು) ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯ ಮದ್ಯಪಾನ ಸಂಯಮ ಮಂಡಳಿಯು ಕೊಪ್ಪಳ ಜಿಲ್ಲೆಯ ಹಟ್ಟಿಗ್ರಾಮವನ್ನು 2026ನೇ ಸಾಲಿನ ಸಂಯಮ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ರಾಜ್ಯ ಮಟ್ಟದ ಸಂಯಮ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಗಸ್ಟ್ 16 ರಂದು ಸಂಜೆ 4.30 ಗಂಟೆಗೆ ಸಂಯಮ ಪ್ರಶಸ್ತಿ-2026ರ ಪ್ರದಾನ ಸಮಾರಂಭವು ಕೊಪ್ಪಳ ತಾಲ್ಲೂಕಿನ ಹಟ್ಟಿ ಗ್ರಾಮದಲ್ಲಿ ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿ ವಿವಿಧ 10 ಗ್ರಾಮಗಳಿಗೆ ಮದ್ಯ ಮಾರಾಟ ಮುಕ್ತ ಅಭಿನಂದನಾ ಪ್ರಶಸ್ತಿ ವಿತರಣೆಯೂ ಜರುಗಲಿದೆ ಎಂದರು.

ರಾಜ್ಯ ಮಟ್ಟದ ಈ ಕಾರ್ಯಕ್ರಮವನ್ನು ಸುವ್ಯವಸ್ಥಿತವಾಗಿ ಆಯೋಜಿಸಬೇಕು. ಹಟ್ಟಿ ಗ್ರಾಮದ ರಸ್ತೆಯ ದುರಸ್ತಿಗೆ ಈ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು. ಇದರ ಜೊತೆಗೆ ಸ್ವಚ್ಛತೆಗೆ ವಿಶೇಷ ಆದ್ಯತೆ ನೀಡಬೇಕು. ಕಾರ್ಯಕ್ರಮದಲ್ಲಿ ಸೂಕ್ತ ವೇದಿಕೆ ವ್ಯವಸ್ಥೆಯನ್ನು ಮಾಡಬೇಕು. ಹೆಚ್ಚಿನ ಸಂಖ್ಯೆಯ ಜನರು ಸೇರುವ ನಿರೀಕ್ಷೆಯಿದ್ದು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಸಾರ್ವಜನಿಕರಿಗೆ ಅಗತ್ಯ ಬಸ್ ವ್ಯವಸ್ಥೆಯನ್ನು ಮಾಡಬೇಕು. ಜನರಿಗೆ ಕೂಡಲು ಆಸನಗಳು, ಕುಡಿಯುವ ನೀರು ಮತ್ತು ಊಟದ ವ್ಯವಸ್ಥೆಯನ್ನು ಮಾಡಬೇಕು. ಕಾರ್ಯಕ್ರಮ ದಿನದಂದು ವಿದ್ಯುತ್ ಪೂರೈಕೆಯಲ್ಲಿ ಯಾವುದೇ ರೀತಿಯ ಸಮಸ್ಯೆಯಾಗದಂತೆ ನೋಡಿಕೊಳ್ಳುವಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಳ್ಳಬೇಕು. ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಗೂ ಕರೆ ತರಬೇಕು. ಸಮಾರಂಭದ ವ್ಯವಸ್ಥಿತ ನಿರ್ವಹಣೆಗೆ ಅಧಿಕಾರಿಗಳೆಲ್ಲರೂ ಸಮನ್ವಯದಿಂದ ಕಾರ್ಯನಿರ್ವಹಿಸಿ, ಸಮಾರಂಭವನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಸಭೆಯಲ್ಲಿ ಗಾಂಧಿ ಬಳಗದ ಸದಸ್ಯರಾದ ಸಾವಿತ್ರಿ ಮುಜುಮದಾರ ಹಾಗೂ ಪ್ರಮೋದ್ ಕುಲಕರ್ಣಿ, ಕೊಪ್ಪಳ ಅಬಕಾರಿ ಡಿವೈಎಸ್‌ಪಿ ಶಾಂತೇಶ ಕಮತರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಅಮರೇಶ ಹಾವಿನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ಕೊಪ್ಪಳ ತಾ.ಪಂ ಇಓ ದುಂಡಪ್ಪ ತುರಾದಿ, ಪ್ರಾದೇಶಿಕ ಸಾರಿಗೆ ಇಲಾಖೆಯ ಅಧೀಕ್ಷಕರಾದ ನಾಗೇಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಹಣವಾಳ ಗ್ರಾಮದ ಕೆರೆ ಪುನಶ್ಚೇತನ ಕಾಮಗಾರಿ ಪರಿಶೀಲನೆ ವಿಬಿಜಿರಾಮ್‌ಜೀ ಯೋಜನೆಯಡಿ ಪ್ರತಿಯೊಂದು ಕುಟುಂಬ 125 ದಿನಗಳ ಕೂಲಿ ಕೆಲಸ ನಿರ್ವಹಿಸಿ: ಇಒ ದುಂಡಪ್ಪ ತುರಾದಿ



ಕೊಪ್ಪಳ ಆ.11-

ಪ್ರತಿಯೊಂದು ಕುಟುಂಬವು ಕೆರೆ ಪುನಶ್ಚೇತನ ಕಾಮಗಾರಿ ಮತ್ತು ಇತ್ಯಾದಿ ವೈಯಕ್ತಿಕ ಕಾಮಗಾರಿಗಳಲ್ಲಿ ಒಟ್ಟು 125 ದಿನಗಳ ಕೂಲಿ ಕೆಲಸ ನಿರ್ವಹಿಸುವಂತೆ ಕೊಪ್ಪಳ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಅವರು ಕರೆ ನೀಡಿದರು.

ಹಲಗೇರಿ ಗ್ರಾಮ ಪಂಚಾಯತಿಯಿಂದ ವಿಕಸಿತ ಭಾರತ ಜೀ ರಾಮ್ ಜೀ ಯೋಜನೆಯಡಿ ಹಣವಾಳ ಗ್ರಾಮದ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳಕ್ಕೆ ಶನಿವಾರ (ಆ. 8ರಂದು) ಭೇಟಿ ನೀಡಿ, ಕೂಲಿಕಾರರನ್ನುದ್ದೇಶಿಸಿ ಅವರು ಮಾತನಾಡಿದರು. ಪ್ರತಿಯೊಬ್ಬರು ರೂ. 382 ಕೂಲಿ ಬರುವಂತೆ ಕೂಲಿ ಕೆಲಸ ನಿರ್ವಹಿಸಬೇಕು. ವಿಬಿಜೀರಾಮ್ ಜೀ ಯೋಜನೆಯಡಿ ಪ್ರಸ್ತುತ ಪ್ರತಿ ದಿನಕ್ಕೆ ಕೂಲಿ ರೂ. 382 ಹಣ ಪಾವತಿಸಲಾಗುತ್ತದೆ. ನಿಮಗೆ ನೀಡಿರುವ ಅಳತೆಗನುಗುಣವಾಗಿ ಕೆಲಸ ನಿರ್ವಹಿಸಬೇಕೆಂದರು. ಕೂಲಿಕಾರರೊಂದಿಗೆ ಸಂವಾದ: ಕೆರೆ ಪುನಶ್ಚೇತನ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕೂಲಿ ಕಾರರೊಂದಿಗೆ ತಾಲೂಕ ಪಂಚಾಯತಿ ಇಒ ಸಂವಾದ ನಡೆಸಿ ಮಹಿಳೆಯರು ಕೂಡಾ ಹೆಚ್ಚಿನ ಪ್ರಮಾಣದಲ್ಲಿ ಕೆಲಸಕ್ಕೆ ಹಾಜರಾಗುವಂತೆ ತಿಳಿಸಿದರು. ನಂತರ ಕಾಮಗಾರಿಯಲ್ಲಿ ಕೆಲಸಕ್ಕೆ ಹಾಜರಾಗಿರುವ ಕುರಿತು ಎನ್.ಎಂ.ಎಂ.ಎಸ್ ಹಾಜರಾತಿ ಪರಿಶೀಲಿಸಿದರು. ಈ ಸಂದರ್ಭದಲ್ಲಿ ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ತಾಂತ್ರಿಕ ಸಹಾಯಕ ರಫೀಕ ಬಿಎಫ್‌ಟಿ ಮಲ್ಲಯ್ಯ, ಡಿಇಒ ಮಾಲತೇಶ, ಗ್ರಾಮ ಕಾಯಕ ಮಿತ್ರ ವಿಜಯಲಕ್ಷ್ಮೀ, ಕಾಯಕ ಬಂಧು ರುದ್ರಪ್ಪ ಕರ್ಕಿಹಳ್ಳಿ, ಗವಿಸಿದ್ದಪ್ಪ, 179 ಕೂಲಿಕಾರರು ಹಾಜರಿದ್ದರು.

ಜಂತು ರಹಿತ ಮಕ್ಕಳು ದೇಶದ ಸಂಪತ್ತು: ಡಾ. ಈಶ್ವರ ಎಸ್. ಸವಡಿ

ಕೊಪ್ಪಳ ಆ.11-

ಜಂತು ರಹಿತ ಮಕ್ಕಳು ದೇಶದ ಸಂಪತ್ತು ಆಗಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಈಶ್ವರ ಎಸ್. ಸವಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ, ಕೊಪ್ಪಳ ಸರ್ಕಾರಿ ಆದರ್ಶ ವಿದ್ಯಾಲಯ ಟಣಕನಕಲ್ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ (ಆ. 10ರಂದು) ಟಣಕನಕಲ್ ಸರ್ಕಾರಿ ಆದರ್ಶ ವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ''ರಾಷ್ಟ್ರೀಯ ಜಂತುಹುಳು ನಿವಾರಣೆ ದಿನ''ದ ಜಿಲ್ಲಾಮಟ್ಟದ ಉದ್ಘಾಟನಾ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಹಾಗೂ ಮಕ್ಕಳಿಗೆ ಜಂತುನಿವಾರಕ ಮಾತ್ರೆ ವಿತರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

1 ರಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಅಲ್ಬೆಂಡಾಜೋಲ್ ಮಾತ್ರೆಯನ್ನು ಉಚಿತವಾಗಿ ನೀಡಲಾಗುತ್ತದೆ. ಜಂತುನಿವಾರಕ ಮಾತ್ರೆ ಸೇವಿಸುವುದರಿಂದ ರಕ್ತಹೀನತೆ ನಿಯಂತ್ರಣ, ಪೌಷ್ಠಿಕಾಂಶ ಹೀರಿಕೊಳ್ಳುವಿಕೆ ಸುಧಾರಣೆ, ಏಕಾಗ್ರತೆ ಹಾಗೂ ಕಲಿಕಾ ಸಾಮರ್ಥ್ಯ ಹೆಚ್ಚಳಕ್ಕೆ ಸಹಕಾರಿಯಾಗುತ್ತದೆ. ಅಲ್ಲದೇ ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ



ಹಾಜರಾತಿ ಸುಧಾರಿಸಲು ನೆರವಾಗುತ್ತದೆ. ಪರಿಸರದಲ್ಲಿ ಜಂತುಹುಳುಗಳ ಪ್ರಮಾಣ ಕಡಿಮೆ ಮಾಡುವ ಮೂಲಕ ಸಮುದಾಯದ ಆರೋಗ್ಯಕ್ಕೂ ಪ್ರಯೋಜನಕಾರಿಯಾಗಿದೆ. ಆದ್ದರಿಂದ ಎಲ್ಲಾ ಮಕ್ಕಳು ತಪ್ಪದೇ ಜಂತುನಿವಾರಕ ಮಾತ್ರೆ ಸೇವಿಸಬೇಕು ಎಂದರು. ಜಂತುನಿವಾರಣಾ ಕಾರ್ಯಕ್ರಮವನ್ನು ವರ್ಷಕ್ಕೆ ಎರಡು ಬಾರಿ, ಆರು ತಿಂಗಳಿಗೊಮ್ಮೆ ಹಮ್ಮಿಕೊಳ್ಳಲಾಗುತ್ತದೆ. ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳು, ವಸತಿಶಾಲೆಗಳು, ಬಾಲಮಂದಿರಗಳು ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. ಜಂತು ರಹಿತ ಪರಿಸರ ನಿರ್ಮಾಣಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಅವರು ಕರೆ ನೀಡಿದರು.

ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ. ಪ್ರಕಾಶ್.ವಿ ಅವರು ಕಾರ್ಯಕ್ರಮದ ಗುರಿ ಮತ್ತು ಉದ್ದೇಶ ಕುರಿತು ಮಾಹಿತಿ ನೀಡಿ, 1 ರಿಂದ 2 ವರ್ಷದ ಮಕ್ಕಳಿಗೆ 200 ಮಿ.ಗ್ರಾಂ.ನ ಅರ್ಧ ಮಾತ್ರೆ ಹಾಗೂ 2 ವರ್ಷ ಮೇಲ್ಪಟ್ಟ ಮಕ್ಕಳಿಗೆ 400 ಮಿ.ಗ್ರಾಂ.ನ ಪೂರ್ಣ ಮಾತ್ರೆ ನೀಡಲಾಗುತ್ತದೆ. ಸಣ್ಣ ಮಕ್ಕಳಿಗೆ ಮಾತ್ರೆಯನ್ನು ನೀರಿನಲ್ಲಿ ಕರಗಿಸಿ ನಿಧಾನವಾಗಿ ಕುಡಿಸಬೇಕು ಎಂದು ತಿಳಿಸಿದರು.

ಮಕ್ಕಳು ಮತ್ತು ಹದಿಹರೆಯದವರಲ್ಲಿ ಕಂಡುಬರುವ ಜಂತುಬಾಧೆ, ಅಪೌಷ್ಠಿಕತೆ ಹಾಗೂ ರಕ್ತಹೀನತೆ ತಡೆಗಟ್ಟುವುದು ಮತ್ತು ಅವರು ಮಾನಸಿಕ ಹಾಗೂ ದೈಹಿಕವಾಗಿ ಸದೃಢವಾಗಿ ಬೆಳೆಯಲು ನೆರವಾಗುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ವೈಯಕ್ತಿಕ ಸ್ವಚ್ಛತೆ ಕಾಪಾಡುವುದು, ಊಟ ಮಾಡುವ ಮೊದಲು ಹಾಗೂ ಶೌಚಾಲಯ ಬಳಕೆಯ ನಂತರ ಕಡ್ಡಾಯವಾಗಿ ಸಾಬೂನು ಬಳಸಿ ಕೈತೊಳೆಯುವ ಕುರಿತು ಅವರು ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು.

ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ ಅಧ್ಯಕ್ಷರಾದ ದೇವರಾಜ ಕಿನ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳಲ್ಲಿ ರಕ್ತಹೀನತೆ ತಡೆಗಟ್ಟಲು ಜಂತುನಿವಾರಣಾ ಕಾರ್ಯಕ್ರಮ ಅತ್ಯಂತ ಉಪಯುಕ್ತವಾಗಿದೆ. ''ಜಂತು ರಹಿತ ಮಕ್ಕಳು ದೇಶದ ಸಂಪತ್ತು. ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವುದು ನಮ್ಮೆಲ್ಲರ ಜವಾಬ್ದಾರಿ'' ಎಂದು ತಿಳಿಸಿದರು.

ತಾಲೂಕಾ ಆರೋಗ್ಯಾಧಿಕಾರಿ ಡಾ. ವೆಂಕಟೇಶ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಕಿನ್ನಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ವಿದ್ಯಾಶ್ರೀ, ಶಾಲಾ ಮುಖ್ಯೋಪಾಧ್ಯಾಯರಾದ ಪ್ರಕಾಶ ತಗಡಿನಮನಿ ಸೇರಿದಂತೆ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಯ ಉಪಾಧ್ಯಕ್ಷರು ಹಾಗೂ ಸದಸ್ಯರು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು, ಆರ್.ಸಿ.ಹೆಚ್. ವಿಭಾಗದ ಸಿಬ್ಬಂದಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಸ.ಆ.ಅಧಿಕಾರಿ, ಪ್ರಾ.ಆ. ಸುರಕ್ಷಾಧಿಕಾರಿ, ಶಾಲಾ ಶಿಕ್ಷಕರು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಇತರೆ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸುನಿತಾ ಅವರು ಕಾರ್ಯಕ್ರಮ ನಿರೂಪಿಸಿದರು.

ಬಳ್ಳಾರಿ: ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮಕ್ಕೆ ಚಾಲನೆ

ಮಗುವಿನ ಸರ್ವತೋಮುಖ ಬೆಳವಣಿಗೆಗೆ ಜಂತುಹುಳು ನಿವಾರಕ ಮಾತ್ರೆ ಸಹಕಾರಿ: ಡಾ. ಅಲಕಾನಂದ ಡಿ. ಮಳಗಿ



ಬಳ್ಳಾರಿ,ಆ.11-

ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆ ಸರಿಯಾಗಿ ಆಗಲು ಮತ್ತು ಅವರ ಸರ್ವತೋಮುಖ ವಿಕಾಸಕ್ಕೆ ಪೂರಕವಾಗಿ ಪ್ರತಿ ಆರು ತಿಂಗಳಿಗೊಮ್ಮೆ ತಪ್ಪದೇ ಜಂತುಹುಳು ನಿವಾರಕ (ಅಲ್ಬೆಂಡಜೋಲ್) ಮಾತ್ರೆಗಳನ್ನು ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅಲಕಾನಂದ ಡಿ. ಮಳಗಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರ್.ಸಿ.ಹೆಚ್. ವಿಭಾಗ, ಗಾಂಧಿನಗರದ ನಗರ ಆರೋಗ್ಯ ಕೇಂದ್ರ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಗರದ ಕಪ್ಪಗಲ್ಲು ರಸ್ತೆಯ ಸರ್ಕಾರಿ ಪ್ರೌಢಶಾಲೆ ಹಾಗೂ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ''ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮ''ದಡಿ ಸಮುದಾಯ ಆಧಾರಿತ ಜಂತುಹುಳು ನಿವಾರಣೆ ಅಭಿಯಾನ ಕಾರ್ಯಕ್ರಮವು ಉದ್ಘಾಟಿಸಿ ಅವರು ಮಾತನಾಡಿದರು.

ದೇಹದಲ್ಲಿ ರಕ್ತದ ಪ್ರಮಾಣ ಕಡಿಮೆಯಾದಂತೆ ರೋಗನಿರೋಧಕ ಶಕ್ತಿಯೂ ಕುಂದುತ್ತದೆ. ಇದರಿಂದ ಸಣ್ಣಪುಟ್ಟ ಕಾಯಿಲೆಗಳೂ ದೀರ್ಘಾವಧಿಯವರೆಗೆ ಕಾಡಬಹುದು. ಮುಖ್ಯವಾಗಿ ಹೆಣ್ಣುಮಕ್ಕಳಲ್ಲಿ ರಕ್ತಹೀನತೆ ಮುಂದುವರಿದರೆ ಹದಿಹರೆಯದ ಸಮಸ್ಯೆಗಳು ಗಂಭೀರ ಸ್ವರೂಪ ಪಡೆಯುತ್ತವೆ. ರಕ್ತಹೀನತೆಯನ್ನು ಆರಂಭದಲ್ಲಿಯೇ ಗುರುತಿಸುವುದರಿಂದ ಮಕ್ಕಳ ದೈಹಿಕ ಬೆಳವಣಿಗೆಯ ಕುಂಠಿತವನ್ನು ತಡೆಗಟ್ಟಿ, ಅವರ ಬಾಲ್ಯವನ್ನು ಸದೃಢಗೊಳಿಸಲು ಸಾಧ್ಯ ಎಂದು ಹೇಳಿದರು.

1 ರಿಂದ 2 ವರ್ಷದೊಳಗಿನ ಮಕ್ಕಳಿಗೆ 200 ಮಿಲಿಗ್ರಾಂ ಹಾಗೂ 2 ರಿಂದ 19 ವರ್ಷದೊಳಗಿನ ಮಕ್ಕಳಿಗೆ 400 ಮಿಲಿಗ್ರಾಂ ಅಲ್ಬೆಂಡಾಜೋಲ್ ಮಾತ್ರೆಗಳನ್ನು ನೀಡಲಾಗುತ್ತಿದೆ. ಜಂತು ರಹಿತ ಮಕ್ಕಳು ದೇಶದ ಸಂಪತ್ತು. ಎಲ್ಲಾ ವಿದ್ಯಾರ್ಥಿಗಳು ಈ ಮಾತ್ರೆಯ ಸದುಪಯೋಗ ಪಡೆದುಕೊಂಡು ಶಿಕ್ಷಣದ ಕಡೆಗೆ ಹೆಚ್ಚು ಗಮನಹರಿಸಿ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ. ಹನುಮಂತಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯ ಎಲ್ಲಾ ಗ್ರಾಮ, ನಗರ ಮತ್ತು ಪಟ್ಟಣಗಳ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಮಾತ್ರೆ ವಿತರಿಸಲು ಕ್ರಿಯಾ ಯೋಜನೆ ರೂಪಿಸಲಾಗಿದೆ. ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲೆ, ಕಾಲೇಜುಗಳಲ್ಲಿ ಮಾತ್ರೆ ನೀಡಲಾಗುತ್ತಿದ್ದು, ಮಾತ್ರೆ ಪಡೆಯಲು ಬಿಟ್ಟುಹೋದ ಮಕ್ಕಳಿಗೆ ಆಗಸ್ಟ್ 17 ರಂದು ನೀಡಲಾಗುವುದು. ಮಕ್ಕಳಿಗೆ ಯಾವುದೇ ಕಾರಣಕ್ಕೂ ಮಾತ್ರೆಯನ್ನು ನುಂಗಿಸದೇ, ಚೀಪಿಸಲು ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಜಂತುಹುಳು ನಿವಾರಣೆಯಿಂದ ರಕ್ತಹೀನತೆ ನಿಯಂತ್ರಣ, ಪೌಷ್ಟಿಕತೆ ಹಾಗೂ ರೋಗನಿರೋಧಕ ಶಕ್ತಿ ಸುಧಾರಣೆ, ಓದಿನಲ್ಲಿ ಏಕಾಗ್ರತೆ, ಹಾಜರಾತಿಯಲ್ಲಿ ಪ್ರಗತಿ ಮತ್ತು ದೈಹಿಕ-ಮಾನಸಿಕ ಆರೋಗ್ಯ ರಕ್ಷಣೆ ಸಾಧ್ಯವಾಗುತ್ತದೆ. ಕಾಯಿಲೆಯ ಲಕ್ಷಣಗಳು ಕಾಣಿಸದಿದ್ದರೂ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಈ ಸುರಕ್ಷಿತ ಮಾತ್ರೆಯನ್ನು ಸೇವಿಸುವುದು ಅಗತ್ಯ ಎಂದು ಅವರು ವಿವರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ವೀರೇಂದ್ರ ಕುಮಾರ್, ವೈದ್ಯಾಧಿಕಾರಿಗಳಾದ ಡಾ. ಸಾತ್ವಿಕ್ ಹಾಗೂ ಡಾ. ಚಂದನ, ಇಲಾಖೆ ಸಿಬ್ಬಂದಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿಕಸಿತ ಭಾರತ ಜೀರಾಮ್‌ಜೀ ಕ್ರಿಯಾ ಯೋಜನೆ ತಯಾರಿಕೆ: ಕುಣಿಕೇರಿ ವಿಶೇಷ ಗ್ರಾಮಸಭೆ



ಕೊಪ್ಪಳ,ಆ.11-

ರೈತರು ಹಾಗೂ ಕೂಲಿಕಾರರ ಆರ್ಥಿಕ ಸಬಲೀಕರಣದ ಜೊತೆಗೆ ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ವಿಕಸಿತ ಭಾರತ ಜೀರಾಮ್‌ಜೀ ಯೋಜನೆ ಪೂರಕವಾಗಲಿದೆ ಎಂದು ಕುಣಿಕೇರಿ ಗ್ರಾಮ ಪಂಚಾಯತಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಂದಪ್ಪ ಅಂಗಡಿ ಹೇಳಿದರು.

ಕೊಪ್ಪಳ ತಾಲೂಕಿನ ಕುಣಿಕೇರಿ ಗ್ರಾಮ ಪಂಚಾಯತಿ ಆವರಣದಲ್ಲಿ ಸೋಮವಾರ (ಆ. 10ರಂದು) 2026-27ನೇ ಸಾಲಿನ ವಿಕಸಿತ ಭಾರತ ಜೀರಾಮ್‌ಜೀ ಯೋಜನೆಯ ಕ್ರಿಯಾ ಯೋಜನೆ ಸಿದ್ದಪಡಿಸುವ ಕುರಿತು ಆಯೋಜಿಸಿದ್ದ ವಿಶೇಷ ಗ್ರಾಮಸಭೆಯಲ್ಲಿ ಅವರು ಮಾತನಾಡಿದರು.

ಗ್ರಾಮ ಪಂಚಾಯತಿ ಹಾಗೂ ಅನುಷ್ಠಾನ ಇಲಾಖೆಗಳಾದ ತೋಟಗಾರಿಕೆ, ಕೃಷಿ, ಅರಣ್ಯ ಮತ್ತು ರೇಷ್ಮೆ ಇಲಾಖೆಗಳ ಮೂಲಕ ವಿವಿಧ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅವಕಾಶವಿದೆ. ರೈತರು ವೈಯಕ್ತಿಕ ಕಾಮಗಾರಿಗಳ ಸೌಲಭ್ಯವನ್ನು ಪಡೆದುಕೊಳ್ಳಬೇಕು. ರಾಷ್ಟ್ರೀಯ ತೋಟಗಾರಿಕೆ ಇಲಾಖೆಯಡಿ ದೊರೆಯುವ ವಿವಿಧ ಸೌಲಭ್ಯಗಳನ್ನು ಸಹ ಸದುಪಯೋಗಪಡಿಸಿಕೊಳ್ಳಬೇಕು. ಈಗಾಗಲೇ ಗ್ರಾಮಸ್ಥರಿಂದ ಸಲ್ಲಿಕೆಯಾಗಿರುವ ವಿವಿಧ ಕಾಮಗಾರಿಗಳ ಬೇಡಿಕೆಗಳನ್ನು ಗ್ರಾಮಸಭೆಯಲ್ಲಿ ವಿವರಿಸಿದರು.

ತಾಲೂಕು ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ವಿಕಸಿತ ಭಾರತ ಜೀರಾಮ್‌ಜೀ ಯೋಜನೆಯು ಗ್ರಾಮೀಣ ಭಾಗದ ಕೂಲಿಕಾರರು ಉದ್ಯೋಗಕ್ಕಾಗಿ ಗುಳೆ ಹೋಗುವುದನ್ನು ತಡೆದು, ಪ್ರತಿ ಕುಟುಂಬಕ್ಕೆ ಸ್ಥಳೀಯವಾಗಿ 125 ದಿನಗಳ ಕೂಲಿ ಕೆಲಸ ಒದಗಿಸುವ ಉದ್ದೇಶ ಹೊಂದಿದೆ. ಪುರುಷರು ಮತ್ತು ಮಹಿಳೆಯರಿಗೆ ಸಮಾನ ಕೂಲಿ ನಿಗದಿಪಡಿಸಲಾಗಿದೆ. ಯೋಜನೆಯಡಿ ಜಲ ಸಂರಕ್ಷಣೆ, ನೀರಾವರಿ, ಅಂತರ್ಜಲ ಮರುಪೂರಣ, ಜಲಾನಯನ ಪ್ರದೇಶಗಳ ಅಭಿವೃದ್ಧಿ ಹಾಗೂ ಜಲಮೂಲಗಳ ಪುನಶ್ಚೇತನದಂತಹ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತದೆ. ವಿಕಸಿತ ಗ್ರಾಮ ಪಂಚಾಯತಿಯಿಂದ ವಿಕಸಿತ ಭಾರತದತ್ತ ಸಾಗುವ ಯೋಜನೆಯ ಉದ್ದೇಶವನ್ನು ಸಾಕಾರಗೊಳಿಸಬೇಕು ಎಂದರು.

ಪ್ರಸ್ತುತ ಪ್ರತಿ ಮಾನವ ದಿನಕ್ಕೆ ರೂ.382 ಕೂಲಿ ನಿಗದಿಪಡಿಸಲಾಗಿದ್ದು, ಕಾರ್ಮಿಕರು ಅಳತೆಗೆ ಅನುಗುಣವಾಗಿ ಕೆಲಸ ನಿರ್ವಹಿಸಬೇಕು. ಕೂಲಿ ಮೊತ್ತವನ್ನು ಕಾಮಗಾರಿಯ ಅಳತೆಗೆ ಅನುಗುಣವಾಗಿ ಪಾವತಿಸಲಾಗುವುದು. ಒಟ್ಟು 318 ಕಾಮಗಾರಿಗಳ ಪೈಕಿ ಜಾನುವಾರು ಶೆಡ್, ಮೇಕೆ ಶೆಡ್, ಕೃಷಿಹೊಂಡ, ಬದು ನಿರ್ಮಾಣ, ಕೋಳಿ ಶೆಡ್ ಸೇರಿದಂತೆ ವಿವಿಧ ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದ್ದು, ಅರ್ಹರು ಇದರ ಸದುಪಯೋಗ ಪಡೆದು 125 ದಿನಗಳ ಉದ್ಯೋಗ ಪಡೆಯಬೇಕು ಎಂದು ಕರೆ ನೀಡಿದರು. ಜಮೀನು ಹೊಂದಿರದ ಕುಟುಂಬಗಳು ಗ್ರಾಮ ಪಂಚಾಯತಿಯಿಂದ ಕೈಗೊಳ್ಳುವ ಸಾಮೂಹಿಕ ಕಾಮಗಾರಿಗಳಲ್ಲಿ ಕೂಲಿ ಕೆಲಸ ನಿರ್ವಹಿಸಿ ಆರ್ಥಿಕವಾಗಿ ಸಬಲರಾಗಬೇಕು. ಹೊಸದಾಗಿ ನೋಂದಣಿಯಾದ ಕುಟುಂಬಗಳಿಗೆ ಗ್ಯಾರಂಟಿ ಕಾರ್ಡ್ಗಳನ್ನು ವಿತರಿಸಲಾಗುವುದು ಎಂದರು.

ಸಂಜೀವಿನಿ ಯೋಜನೆಯ ಸಿಬ್ಬಂದಿ ವೀರೇಶ ಮಾತನಾಡಿ, ಸಂಜೀವಿನಿ ಸಂಘಗಳ ಮಹಿಳೆಯರು ವೈಯಕ್ತಿಕ ಕಾಮಗಾರಿಗಳಿಗೆ ಆದ್ಯತೆ ನೀಡಿ ಕಾಮಗಾರಿ ಬೇಡಿಕೆ ಸಲ್ಲಿಸಬೇಕು. ಎಂದು ತಿಳಿಸಿದರು.

ಸಭೆಯಲ್ಲಿ ಪಶು ವೈದ್ಯಾಧಿಕಾರಿ ವಿನಯ ಅಂಗಡಿ, ತಾಂತ್ರಿಕ ಸಹಾಯಕಿ ವೀಣಾ ಅಂಗಡಿ, ಸರಸ್ವತಿ, ರಮೇಶ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಹನಮೇಶ ಸೇರಿದಂತೆ ರೈತರು, ಸಂಜೀವಿನಿ ಯೋಜನೆಯ ಒಕ್ಕೂಟದ ಮಹಿಳೆಯರು, ಗ್ರಾಮಸ್ಥರು ಹಾಗೂ ಕಾಯಕ ಬಂಧುಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

1,050 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಶಿವರಾಜ್ ಜಾನೇಕಲ್

7760666643, 6364101482 ಸಂಪರ್ಕ ಸಂಖ್ಯೆಗಳಾಗಿವೆ.

ಸುದ್ದಿಗೋಷ್ಠಿಯಲ್ಲಿ ಮಹಾಸಭಾದ ಉಪಾಧ್ಯಕ್ಷ ಬಸವರಾಜ್, ಸಂತೋಷ್ ನಂದಿನಿ, ಕೆ. ಯಲ್ಲಪ್ಪ, ಶ್ರೀನಿವಾಸ, ನಾಗರಾಜ್ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಿಂಧನೂರು ತಾಲೂಕಿನ ಸಾರ್ವಜನಿಕರಿಗೆ ಗುಣಮಟ್ಟದ ಹಾಗೂ ಸಮಯೋಚಿತ ಆರೋಗ್ಯ ಸೇವೆ ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿ. ಎಂಎಲ್ಸಿ . ಬಸನಗೌಡ ಬಾದರ್ಲಿ

ನಿರ್ಲಕ್ಷಕ್ಕೆ ಅವಕಾಶ ನೀಡಬಾರದು. ರೋಗಿಗಳಿಗೆ ಉತ್ತಮ ಚಿಕಿತ್ಸೆ . ಅಗತ್ಯ ಔಷದಿ ಹಾಗೂ ಸೂಕ್ತ ಸಮಯದಲ್ಲಿ ಆರೋಗ್ಯ ಸೇವೆ ದೊರೆಯುವಂತೆ ವೈದ್ಯರು ಮತ್ತು ಸಿಬ್ಬಂದಿ ಪರಸ್ಪರ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕೆಂದು . ವಿಧಾನ ಪರಿಷತ್ ಶಾಸಕ. ಬಸನಗೌಡ ಬಾದರ್ಲಿ ಅವರು ಹೇಳಿದರು. ಸಾರ್ವಜನಿಕರ ಆರೋಗ್ಯದ ವಿಚಾರದಲ್ಲಿ ಯಾವುದೇ ರಾಜ್ಯ ಮಾಡಿಕೊಳ್ಳದೆ. ಸಿಂಧನೂರು ತಾಲೂಕಿನ ಜನತೆಗೆ ಉತ್ತಮ ಆರೋಗ್ಯ ಸೇವೆ ದೊರೆಯುವಂತೆ. ಸರಕಾರದ ವತಿಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.ಈ ಸಭೆಯಲ್ಲಿ. ಜಿಲ್ಲಾ ಆರೋಗ್ಯ ಅಧಿಕಾರಿ. ಡಾ. ನಂದಿತಾ. ಸಿಂಧನೂರು ತಾಲೂಕ ಆರೋಗ್ಯ ಅಧಿಕಾರಿ. ಅಯ್ಯನಗೌಡ. ಮುಖ್ಯ ಆರೋಗ್ಯ ಅಧಿಕಾರಿ. ಸುರೇಶ್ ಗೌಡ ಸೇರಿದಂತೆ. ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಮುಂದಿನ 10 ತಿಂಗಳ ಬರಸ್ಥಿತಿ ಎದುರಿಸಲು ಸಿದ್ಧರಾಗಿ: ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ



ಕಲಬುರಗಿ,ಆ.11-

ಪ್ರಸ್ತುತ ಬರಗಾಲ ಹಿಂದಿನ ಬರಗಾಲಕ್ಕೆ ಅಜಗಜಾಂತರ ವ್ಯತ್ಯಾಸ ವಿದೆ. ಸೂಪರ್ ಎಲ್ನಿನೋದಿಂದ ಬರದ ಛಾಯೆ ಮುನ್ಸೂಚನೆ ಇರುವ ಕಾರಣ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಹೀಟ್ ವೇವ್ ಗಳನ್ನು ಸಮರ್ಥವಾಗಿ ಎದುರಿಸಲು ಮುಂದಿನ 10 ತಿಂಗಳಿಗೆ ಬೇಕಾದ ಕ್ರಿಯಾ ಯೋಜನೆ ರೂಪಿಸ ಬೇಕು ಎಂದು ಅಧಿಕಾರಿಗಳಿಗೆ ರಾಜ್ಯ ದ ಗೃಹ, ಐ.ಟಿ-ಬಿ.ಟಿ, ಇ.-ಆಡಳಿತ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ (ಪ್ರಕೃತಿ ವಿಕೋಪ) ಸಚಿವ ಪ್ರಿಯಾಂಕ್ ಖರ್ಗೆ ಸೂಚಿಸಿದರು.

ಸೋಮವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬರ ಪರಿಸ್ಥಿತಿ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಕೃಷಿ ಚಟುವಟಿಕೆ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಇನ್ನು ಮಳೆಗಾಲ ಪೂರ್ಣಗೊಳ್ಳದ ಕಾರಣ ಎನ್.ಡಿ.ಆರ್.ಎಫ್. ನಿಯಮಾವಳಿ ಪ್ರಕಾರ ಘೋಷಣೆ ಮಾಡಿಲ್ಲ. ಮುಂದಿನ ದಿನದಲ್ಲಿ ಇದು ಹೀಗೆ ಮುಂದುವರೆದರೆ ಬರ ಘೋಷಿಸಿದಲ್ಲಿ ಅದಕ್ಕೆ ಪೂರಕವಾಗಿ ತಳಹಂತ ದಿಂದ ಕೆಲಸ ಕಾರ್ಯ ಮಾಡಲು ಎಲ್ಲಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಲು ಸಿದ್ಧರಿರಬೇಕು. ಜನ ಮತ್ತು ಜಾನುವಾರುಗಳಗೆ ನೀರು ಪೂರೈಕೆ ನಮ್ಮ ಮೊದಲ ಆದ್ಯತೆಯಾಗಿರಬೇಕು. ಜಾನುವಾರುಗಳಿಗೆ ಮೇವು ಕೊರತೆಯಾಗದಂತೆ ನೋಡಿಕೊಳ್ಳುವುದರ ಜೊತೆಗೆ ಗೋಶಾಲಾ ತೆರೆಯಲು ಊರು ಗುರುತಿಸಬೇಕು ಎಂದರು.

ವಿಶೇಷವಾಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ನೀರಿನ ಸಮಸ್ಯೆ ಇರುವ ಹಳ್ಳಿಗಳಿಗೆ ಹೋಗಿ ಅವರ ಸಮಸ್ಯೆ ಆಲಿಸಬೇಕು. ಚಿತ್ತಾಪುರ, ಸೇಡಂ, ಚಿಂಚೋಳಿಯಿಂದ ಕುಡಿಯುವ ನೀರಿನ ಸಮಸ್ಯೆ ಕುರಿತು ಅಲ್ಲಿನ ಜನನಗೆ ಕರೆ ಮಾಡುತ್ತಾರೆ. ಅನೇಕ ಅಧಿಕಾರಿಗಳು ಮೊಬೈಲ್ ಕರೆ ಸ್ವೀಕರಿಸಿಲ್ಲ ಎಂಬ ಆರೋಪವಿದೆ. ಸಚಿವನಾಗಿರುವ ನಾನೇ ಕರೆ ಸ್ವೀಕರಿಸಿ ಅವರ ಸಮಸ್ಯೆ ಆಲಿಸಬೇಕಾದರೆ ನಿಮಗೇನು ತೊಂದರೆ? ಎಂದು ಅಧಿಕಾರಿಗನ್ನು ಪ್ರಶ್ನಿಸಿದ ಸಚಿವರು, ಸಾರ್ವಜನಿಕರ ಸಮಸ್ಯೆಗಳಿಗೆ ಪ್ರಥಮಾದ್ಯತೆ ಮೇಲೆ ಸ್ಪಂದಿಸುವ ಮತ್ತು ಮಾನವೀಯತೆಯಿಂದ ಕಾರ್ಯನಿರ್ವಹಿಸುವ ಗುಣ ಅಧಿಕಾರಿಗಳು ಹೊಂದುವುದು ಅವಶ್ಯಕತೆ ಇದೆ ಎಂದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನೂರ ಮಾತನಾಡಿ, ಜಿಲ್ಲೆಯ 8 ತಾಲೂಕುಗಳ 35 ಗ್ರಾಮ ಪಂಚಾಯತಿಗಳ ವ್ಯಾಪ್ತಿಯ 41 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, 5 ಟ್ಯಾಂಕರ್ ಮೂಲಕ 5 ಗ್ರಾಮಗಳಿಗೆ ಮತ್ತು 4 ಖಾಸಗಿ ಬೋರವೆಲ್ ಬಾಡಿಗೆಗೆ ಪಡೆದು 36 ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿದೆ. ಮುಂದಿನ ದಿನದಲ್ಲಿ ಬರದ ಕ್ಷಾಮ ಹೆಚ್ಚಾದಲ್ಲಿ ಅದಕ್ಕೂ ಬೇಕಾದ ಕ್ರಿಯಾ ಯೋಜನೆ ರೂಪಿಸಲಾಗುತ್ತಿದೆ ಎಂದರು.

ರಸಗೊಬ್ಬರ ಅಂಗಡಿಗಳಲ್ಲಿ ದರ ಪ್ರದರ್ಶಿಸಿ:

ರಸಗೊಬ್ಬರ ಅಂಗಡಿಗಳ ಮಾಲಕರು ರೈತರಿಂದ ಹೆಚ್ಚಿನ ದರ ಪಡೆದು ರಸಗೊಬ್ಬರ ಮಾರಾಟ ಮಾಡಲಾಗುತ್ತದೆ ಎಂಬುದು ರೈತನ ಸಾಮಾನ್ಯ ದೂರು. ಇದಕ್ಕೆ ಅವಕಾಶ ನೀಡದ ರೀತಿಯಲ್ಲಿ ಪ್ರತಿ ಅಂಗಡಿಗಳ ಮುಂದೆ ಪ್ರತಿ ದಿನದ ದಾಸ್ತಾನು ಮತ್ತು ರಸಗೊಬ್ಬರ ದರ ನಮೂದಿಸಬೇಕು. ಕೃಷಿ ಅಧಿಕಾರಿಗಳು ನಿರಂತರವಾಗಿ ಇಂತಹ ಅಂಗಡಿಗಳನ್ನು ತಪಾಸಣೆ ಮಾಡಬೇಕು. ಕಾಳ ಸಂತೆಯಲ್ಲಿ ರಸಗೊಬ್ಬರ ಮಾರಾಟ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಇನ್ನು ನಿಯಮ ಉಲ್ಲಂಘಿಸಿದ 7 ಅಂಗಡಿಗಳ ಅಮಾನತ್ತಿಗೆ ಈಗಾಗಲೆ ಪ್ರಸ್ತಾವನೆ ಸಲ್ಲಿಸಿರುವುದರಿಂದ ಕೂಡಲೆ ಸದರಿ ಅಂಗಡಿ ಅಮಾನತ್ತು ಮಾಡುವಂತೆ ಕೃಷಿ ಅಧಿಕಾರಿಗಳು ನಿಗಾ ವಹಿಸಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಸೂಚಿಸಿದರು.

ಆ.14 ರೊಳಗೆ ವರದಿ ಕೊಡಿ:

ಕಲಬುರಗಿ ನಗರದ ಸುಮಾರು 35 ವಾರ್ಡ್ಗಳಲ್ಲಿ ಇನ್ನು ಕುಡಿಯುವ ನೀರಿನ ಸಮಸ್ಯೆ ಇದೆ. ಜುಲೈ ಅಂತ್ಯದ ವರೆಗೆ ಸಮರ್ಪಕವಾಗಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿತ್ತು. ಆಗಸ್ಟ್ 1 ರಿಂದ ಟ್ಯಾಂಕರ್ ನೀರು ಸ್ಥಗಿತಗೊಳಿಸಿದ್ದು ಸಮಸ್ಯೆಯಾಗಿದೆ ಎಂದು ಶಾಸಕ ಅಲ್ಲಮಪ್ರಭು ಪಾಟೀಲ ಮತ್ತು ಕನೀಜ್ ಫಾತಿಮಾ ಸಚಿವರ ಗಮನಕ್ಕೆ ತಂದರು.

ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಮಾತನಾಡಿ, ನಗರದಲ್ಲಿ ಬೇಡಿಕೆ ಇರುವ ವಾರ್ಡ್ಗಳಿಗೆ ಪ್ರತಿ ದಿನ 50 ಟ್ರಿಪ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಎಲ್ ಟಿ ಕಂಪನಿಯವರು ಟ್ಯಾಂಕರ್ ಮೂಲಕ ನೀರು ಪೂರೈಕೆ ನಿಲ್ಲಿಸಿದ್ದರಿಂದ ಕೆಲವು ಬಡಾವಣೆಯಲ್ಲಿ ಸಮಸ್ಯೆ ಉದ್ಭವವಾಗಿದೆ ಎಂದರು.

ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, 50 ಟ್ಯಾಂಕ್ ನೀರು ಯಾವುದಕ್ಕೂ ಸಾಲುವುದಿಲ್ಲ. ಶಾಸಕರ ಸೂಚನೆಯಂತೆ ನೀರು ಪೂರೈಸಬೇಕು. ಪ್ರಸ್ತುತ ನಗರದಲ್ಲಿನ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಸಮಗ್ರವಾಗಿ ವರದಿ ಇದೇ ಆಗಸ್ಟ್ 14 ರೊಳಗೆ ನೀಡಿದಲ್ಲಿ ಅದಕ್ಕೆ ಸರ್ಕಾರದ ಹಂತದಲ್ಲಿ ಹೆಚ್ಚಿನ ಅನುದಾನ ಪಡೆದು ಪರಿಹಾರ ಕಂಡುಕೊಳ್ಳಲಾಗುವುದು. ಇನ್ನು ನೀರು ಪೂರೈಸಲು ವಿಫಲರಾಗಿರುವ ಎಲ್ ಟಿ ಕಂಪನಿ ಮೇಲೆ ಕೂಡಲೆ ಕಾನೂನು ಕ್ರಮ ಕೈಗೊಳ್ಳಿ ಎಂದು ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರಿಗೆ ಸಚಿವರು ನಿರ್ದೇಶನ ನೀಡಿದರು.

ಮಧ್ಯಂತರ ಪರಿಹಾರ ಕೊಡಿ:

ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ ಜಿಲ್ಲೆಯಲ್ಲಿ ಹೆಸರು, ಉದ್ದು, ಸೋಯಾಬಿನ್, ತೊಗರಿ ಹಾಳಾಗಿದೆ. ಬೆಳೆ ವಿಮೆ ಮಾಡಿಸಿದ ರೈತರಿಗೆ ಮಧ್ಯಂತರ ಪರಿಹಾರ ನೀಡಬೇಕು. ಇನ್ನು ರೈತರಿಗೆ ಡಿ.ಎ.ಪಿ. ಜೊತೆಗೆ ಇತರೆ ರಸಗೊಬ್ಬರ ಖರೀದಿಗೆ ಅಂಗಡಿಯವರು ಒತ್ತಾಯ ಮಾಡುತ್ತಿದ್ದು, ಇದು ಅನಗತ್ಯ ರೈತರಿಗೆ ಹೊರೆಯಾಗುತ್ತಿದೆ. ಇಂತಹ ಅಂಗಡಿಗಳ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಿ ಎಂದು ಜಂಟಿ ಕೃಷಿ ನಿರ್ದೇಶಕರಿಗೆ ಸೂಚನೆ ನೀಡಿದರು. ಇದಕ್ಕೆ ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಉತ್ತರಿಸುತ್ತಾ ಈಗಾಗಲೆ 37,051 ರೈತರಿಗೆ ಮಧ್ಯಂತರ ಪರಿಹಾರ ನೀಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ ಎಂದು ಮಾಹಿತಿ ನೀಡಿದರು.

ಕೃಷಿ ಇಲಾಖೆ ಚರ್ಚೆ ವೇಳೆ ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ, ಜಿಲ್ಲೆಯಾದ್ಯಂತ ಮುಂಗಾರು ಪೂರ್ವ ಜೂನ್ ಅಂತ್ಯಕ್ಕೆ ಶೇ.36, ಜುಲೈ ಮತ್ತು ಆಗಸ್ಟ್ ಮಾಹೆಯಲ್ಲಿ ಶೇ.35ರಷ್ಟು ಮಳೆ ಕೊರತೆಯಾಗಿದೆ. ಪ್ರಸಕ್ತ ಮುಮಘಾರುಯ ಹಂಗಾಮಿನಲ್ಲಿ ವಾಡಿಕೆಗ್ಗಿಂತ ಮಳೆ ಕಡಿಮೆಯಾದ ಕಾರಣ 8.90 ಲಕ್ಷ ಹೆಕಟೇರ್‌ನಲ್ಲಿ ಕೇವಲ 5.37 ಲಕ್ಷ ಹೆಕ್ಟೇರ್ ಪ್ರದೇಶ ಮಾತ್ರ ಬಿತ್ತನೆ ಮಾಡಲು ಸಾಧ್ಯವಾಗಿದೆ. ಬೆಳೆ ವಿಮೆ ನೋಂದಣಿಗೆ ಹೆಚ್ಚಿನ ಆದ್ಯತೆ ನೀಡಿದ್ದು, ಇದೂವರೆಗೆ 4.52 ಲಕ್ಷ ರೈತರು ಸುಮಾರು 5.35 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ಬೆಳೆ ವಿಮೆ ನೋಂದಣಿ ಮಾಡಿಕೊಂಡಿದ್ದಾರೆ ಎಂದರು.

ಸಭೆಯಲ್ಲಿ ಸಾಸಕರಾದ ಎಂ.ವೈ.ಪಾಟೀಲ, ಬಸವರಾಜ ಮತ್ತಿಮಡು, ಅವಿನಾಶ ಜಾಧವ, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಅರುಣಕುಮಾರ ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಹರವಾಳ, ಕಾಡಾ ಅಧ್ಯಕ್ಷ ಡಾ.ಅಬ್ದುಲ್ ರಶೀದ್, ಕಲಬುರಗಿ-ಬೀದರ ಹಾಗೂ ಯಾದಗಿರಿ ಹಾಲು ಒಕ್ಕೂಟದ ಅಧ್ಯಕ್ಷ ಆರ್.ಕೆ.ಪಾಟೀಲ, ಕಲಬುರಗಿ ಮಹಾನಗರ ಪಾಲಿಕೆ ಮೇಯರ್ ವರ್ಷಾ ರಾಜೀವ ಜಾನೆ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಕಲಬುರಗಿ ನಗರ ಪೊಲೀಸರ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸುಲು ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

ಜಾಗೃತಿ ಸಮಾವೇಶ, 100 ಸಂಗೀತ ನಿರ್ದೇಶಕರ ಸಮಾಗಮ, ದಾಖಲೀಕರಣ

ಬಯಲಾಟಕ್ಕೆ ಪ್ರಜ್ಞಾವಂತರನ್ನು ಸೆಳೆಯಲು ಸಾಂಘಿಕ ಯತ್ನ: ನಾಗರಾಜ್ ಇಂಗಳಗಿ



ಗಂಗಾವತಿ,ಆ.11-

ಯಕ್ಷಗಾನಕ್ಕಿಂತಲು ತುಂಬಾ ಅಕ`ರ್ಷಣೀಯವಾಗಿರು'ವ' ದೊಡ್ಡಾಟ ಕಲೆ ಇದರ ಮೂಲ ಸ್ವರೂಪಕ್ಕೆ ದಕ್ಕೆಯಾಗದಂತೆ ಇಂದಿನ ಜನತೆಯ ಮನಸೂರೆಗೊಳ್ಳುವಂತೆ ಮಾಡಲು ಚಿಂತನ ಮಂಥನದ ಅಗತ್ಯವಿದ್ದು ಈ ನಿಟ್ಟಿನಲ್ಲಿ ಪ್ರಜ್ಞಾವಂತರನ್ನು ತೊಡಗಿಸಿಕೊಳ್ಳಲು ಸಾಂಘಿಕ ಪ್ರಯತ್ನ ಮಾಡಲಾಗುವುದು ಎಂದು ಕೊಪ್ಪಳ ಜಿಲ್ಲಾ ಬಯಲಾಟ ಕಲಾವಿದರ ಸಂಘದ ಜಿಲ್ಲಾಧ್ಯಕ್ಷ ನಾಗರಾಜ್ ಇಂಗಳಗಿ ಹೇಳಿದರು.

ಅವರು ಸಮೀಪದ ಆನೆಗೊಂದಿಯ ಶ್ರೀ ರಂಗನಾಥ ದೇಗುಲದಲ್ಲಿ ಗಂಗಾವತಿ ತಾಲೂಕು ಘಟಕದ ಪದಾಧಿಕಾರಿಗಳ ಆಯ್ಕೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸೆಪ್ಟಂಬರ್ ತಿಂಗಳಲ್ಲಿ ಜಿಲ್ಲಾ ಹಾಗು ತಾಲೂಕು ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದ್ದು, ಇದರಲ್ಲಿ ಬಯಲಾಟ ಜಾಗೃತಿ ಸಮಾವೇಶ, ಕೊಪ್ಪಳ, ಬಳ್ಳಾರಿ, ವಿಜಯನಗರ ಹಾಗು ರಾಯಚೂರು ಜಿಲ್ಲೆಗಳ ಸಂಗೀತ ನಿರ್ದೇಶಕರನ್ನು (ಹರ್ಮೋನಿಯಂ ಮಾಸ್ತಾರರು) ಒಂದಡೆ ಸೇರಿಸಿ ಬಯಲಾಟ ಅಳಿವು ಉಳಿವು, ಬಯಲಾಟ ಬೆಳವಣಗೆಯಲ್ಲಿ ಯುವಕರ ಪಾತ್ರ ಇತರೆ ವಿಚಾರ ಸಂಕಿರಣದೊದಿಗೆ ಬಯಲಾಟ ಪ್ರದರ್ಶನ, ಮುಮ್ಮೇಳ ಹಾಡುಗಾರಿಕೆ ಹಾಗು ಬಯಲಾಟ ಕಲಾವಿದರಿಂದ ತಜ್ಞರೊಂದಿಗೆ ಸಂವಾದ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಏರ್ಪಡಿ ಸಲಾಗುವುದು ದಿನವಿಡಿ ಬಯ ಲಾಟದ ಹಬ್ಬ ಆಚರಿಸುವ ಮೂಲಕ ಹೊಸ ಮೆರಗು ತರಲಾಗುವುದು ಅಲ್ಲದೆ 100ಕ್ಕು ಹೆಚ್ಚು ಹರ್ಮೋನಿಯಂ ಮಾಸ್ತಾರರ ಸಾಧನೆ ಕುರಿತು ಕಿರು ಪರಿಚಯದ ಪುಸ್ತಕ ತರಲು ಸಮಿತಿ ರಚಿಸಲಾಗುವುದು ಎಂದರು.

ನಂತರ ಇಂಗಳಗಿಯವರು ಗಂಗಾವತಿ ತಾಲೂಕು ಬಯಲಾಟ ಕಲಾವಿದರ ಸಂಘದ ಪದಾಧಿಕಾರಿಗಳ ಆಯ್ಕೆ ವಿವರ ನೀಡಿ ಕಲ್ಯಾಣಿ ಅಂಜನೇಯ್ಯ (ಗೌರವಧ್ಯಕ್ಷರು), ನಾರಾಯಣ ಯಾದವ (ಅಧ್ಯಕ್ಷರು), ರವಿ ಟಿ.ಆನೆಗೊಂದಿ (ಉಪಾಧ್ಯಕ್ಷರು), ಶಂಕರ್ ಕಬ್ಬೇರ್ (ಪ್ರಧಾನ ಕಾರ್ಯದರ್ಶಿ), ವೆಂಕಟೇಶ್ ದಂಡೀನ್ (ಕಾರ್ಯದರ್ಶಿ), ಎ.ಗಿರಿಧರ (ಖಜಾಂಚಿ), ಜಂಬುನಾಥ್ ಆನೆಗೊಂದಿ (ಸಂಘಟನಾ ಕಾರ್ಯದರ್ಶಿ). ಡಿ.ಪಿ.ಕುಪ್ಪರಾಜು, ಸಿಂಗ್ರಪ್ಪ ಸುಬೇದಾರ್ ಎಂ. ಸಿದ್ದಪ್ಪ, ವೀರಣ್ಣ ಬೋವಿ (ಗೌರವ ಸಲಹೆಗಾರರು), ನಾಗರಾಜ್ ಕಾಟಿಕ್, ಪಿ.ಮಂಜುನಾಥ್, ಮೌಲಪ್ಪ ನಾಯಕ, ಕೆ.ನಾಗರಾಜ್ ಇವರನ್ನು ಕಾರ್ಯಕಾರಿ ಮಂಡಳಿ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಿದರು. ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಗೌರವ ಸಲಹೆಗಾರರಾದ ಯಂಕಪ್ಪ ವಕೀಲರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೌಲಪ್ಪ ಆನೆಗೊಂದಿ, ಜಿಲ್ಲಾ ಕಾರ್ಯದರ್ಶಿ ಐಲಿ ರವಿ ಇತರರಿದ್ದರು.



ಬರ ಘೋಷಣೆಗೆ ಬಿಜೆಪಿಯವರು ಕೇಂದ್ರದ ಮೇಲೆ ಒತ್ತಡ ಹೇರಲಿ: ಸಚಿವ ಪ್ರಿಯಾಂಕ್ ಖರ್ಗೆ

ಕಲಬುರಗಿ,ಆ.11-

ಬರ ಘೋಷಣೆ ಮಾಡಬೇಕೆಂದು ರಾಜ್ಯ ಸರ್ಕಾರದ ವಿರುದ್ಧ ಟೀಕೆ ಮಾಡುವುದನ್ನು ಬಿಟ್ಟು, ರಾಜ್ಯಕ್ಕೆ ಅಗತ್ಯವಿರುವ ಪರಿಹಾರ ಹಾಗೂ ಅನುದಾನ ಬಿಡುಗಡೆ ಮಾಡುವಂತೆ ಬಿಜೆಪಿ ನಾಯಕರು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲಿ ಎಂದು ಗೃಹ ಸಚಿವ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸವಾಲು ಹಾಕಿದ್ದಾರೆ.

ಸೋಮವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಬೆಳೆ ವಿಮೆ ಪಾವತಿಯಲ್ಲಿ ಕರ್ನಾಟಕ ದೇಶದಲ್ಲೇ ಮುಂಚೂಣಿಯಲ್ಲಿದ್ದು, ಹೆಚ್ಚು ಬೆಳೆ ವಿಮೆ ಪಾವತಿಸುವ ರಾಜ್ಯಗಳಲ್ಲಿ ಎರಡನೇ ಸ್ಥಾನದಲ್ಲಿದೆ. ಇದು ರಾಜ್ಯ ಸರ್ಕಾರದ ಕ್ರಮಗಳಿಂದ ಸಾಧ್ಯವಾಗಿದೆ ಎಂದರು.

ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾದ ಪಾಲು ಪಡೆಯಲು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಬಳಿ ಹಲವು ಬಾರಿ ಮನವಿ ಮಾಡಲಾಗಿದೆ. ಶಾಸಕರು ಹಾಗೂ ಸಚಿವರು ಪ್ರತಿಭಟನೆ ನಡೆಸಿದ್ದಾರೆ. ಕೊನೆಗೆ ಸುಪ್ರೀಂಕೋರ್ಟ್ ಮೂಲಕ ರಾಜ್ಯದ ಪಾಲನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದೇವೆ. ಪ್ರತಿ ಬಾರಿಯೂ ರಾಜ್ಯದ ಹಕ್ಕಿನ ಹಣಕ್ಕಾಗಿ ಸುಪ್ರೀಂ ಕೋರ್ಟ್ ಮೊರೆ ಹೋಗಲು ಸಾಧ್ಯವೇ? ಎಂದು ಪ್ರಶ್ನಿಸಿದರು.

ಹಿಂದೆ ರಾಜ್ಯಕ್ಕೆ 28 ಕೋಟಿ ಮಾತ್ರ ಪರಿಹಾರ ದೊರೆಯುತ್ತಿತ್ತು. ಇದೀಗ ನಮ್ಮ ಸರ್ಕಾರ ಬಂದಾಗಿನಿಂದ ಜಿಲ್ಲೆಯ ರೈತರಿಗೆ 650 ಕೋಟಿಗೂ ಹೆಚ್ಚು ಪರಿಹಾರ ದೊರೆತಿದೆ. ರಾಜ್ಯದ ರೈತರ ಬಗ್ಗೆ ಬಿಜೆಪಿಯವರಿಗೆ ನಿಜವಾದ ಕಾಳಜಿ ಇದ್ದರೆ, ಕೇಂದ್ರದ ಮೇಲೆ ಒತ್ತಡ ಹೇರಿ ರಾಜ್ಯಕ್ಕೆ ಬರಬೇಕಾದ ಅನುದಾನವನ್ನು ತರಿಸಿಕೊಡಲಿ ಎಂದು ವಾಗ್ದಾಳಿ ನಡೆಸಿದರು.

ಬರ ಘೋಷಣೆ ವಿಚಾರದಲ್ಲಿ ಸರ್ಕಾರವು ಗ್ರೌಂಡ್ ಟ್ರುತ್ ಪರಿಶೀಲನೆ ಹಾಗೂ ಎನ್‌ಡಿಆರ್‌ಎಫ್ ತಂಡದ ವೀಕ್ಷಣೆಯ ಬಳಿಕ ಸೂಕ್ತ ನಿರ್ಧಾರ ಕೈಗೊಳ್ಳಲಿದೆ. ರೈತರ ಸಾಲಮನ್ನಾ ಸೇರಿದಂತೆ ರೈತರ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳನ್ನೂ ಸರ್ಕಾರ ಗಂಭೀರವಾಗಿ ಪರಿಗಣಿಸುತ್ತಿದೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕರಾದ ಅಲ್ಲಂಪ್ರಭು ಪಾಟೀಲ್, ಎಂ.ವೈ.ಪಾಟೀಲ್, ತಿಪ್ಪಣ್ಣಪ್ಪ ಕಮಕನೂರ್, ಜಗದೇವ ಗುತ್ತೇದಾರ್ ಪಾಲಿಕೆ ಮೇಯರ್ ವರ್ಷಾ ಜಾನೆ, ಮಜಹರ್ ಆಲಂ ಖಾನ್, ಪ್ರವೀಣ ಹರವಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಹಳದಿ ನಂಜುರೋಗ ಕೀಟ ನಿರ್ವಹಣೆ: ರೈತರಿಗೆ ಸಲಹೆ ಹೆಸರು, ಉದ್ದು, ಸೋಯಾಬೀನ್ ಬೆಳೆಗಳಲ್ಲಿ ರೋಗಬಾಧೆ; ಮುನ್ನೆಚ್ಚರಿಕೆ ವಹಿಸಲು ಸೂಚನೆ



ಕಲಬುರಗಿ,ಆ.11-

ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾಗಿರುವ ಹೆಸರು, ಉದ್ದು ಹಾಗೂ ಸೋಯಾಬೀನ್ ಬೆಳೆಗಳು 35ರಿಂದ 55 ದಿನಗಳ ಬೆಳವಣಿಗೆ ಹಾಗೂ ಹೂ ಬಿಡುವ ಹಂತ ತಲುಪಿವೆ. ಇತ್ತೀಚಿನ ಹವಾಮಾನ ವೈಪರೀತ್ಯ ಹಾಗೂ ಅಲ್ಪ ಪ್ರಮಾಣದ ಮಳೆಯ ಹಿನ್ನೆಲೆಯಲ್ಲಿ ರಸಹೀರುವ ಕೀಟಗಳು, ಎಲೆ ಮತ್ತು ಕಾಂಡ ತಿನ್ನುವ ಹುಳುಗಳ ಬಾಧೆಯೊಂದಿಗೆ ಹಳದಿ ನಂಜುರೋಗದ ಲಕ್ಷಣಗಳು ಕಂಡುಬರುತ್ತಿದ್ದು, ರೈತರು ಸೂಕ್ತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಸಲಹೆ ನೀಡಿದ್ದಾರೆ.

ಕೃಷಿ ಇಲಾಖೆಯ ಅಧಿಕಾರಿಗಳು ಹಾಗೂ ಕೃಷಿ ವಿಜ್ಞಾನ ಕೇಂದ್ರ, ಕಲಬುರಗಿಯ ವಿಜ್ಞಾನಿಗಳು ಜಿಲ್ಲೆಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಸಂದರ್ಭದಲ್ಲಿ ಹೆಸರು, ಉದ್ದು ಹಾಗೂ ಸೋಯಾಬೀನ್ ಬೆಳೆಗಳಲ್ಲಿ ಹಳದಿ ನಂಜು ರೋಗದ ಬಾಧೆ ಕಂಡುಬಂದಿದೆ.

ಹಳದಿ ನಂಜುರೋಗದ ಲಕ್ಷಣಗಳು: ಮೊದಲಿಗೆ ಎಲೆಗಳ ಮೇಲೆ ಹಳದಿ ಬಣ್ಣದ ಚುಕ್ಕೆಗಳು ಕಾಣಿಸಿಕೊಂಡು, ನಂತರ ಅವು ಹೆಚ್ಚಾಗಿ ಎಲೆಗಳು ಹಳದಿ-ಹಸಿರು ಬಣ್ಣಕ್ಕೆ ತಿರುಗುತ್ತವೆ. ರೋಗಬಾಧೆ ತೀವ್ರವಾದಾಗ ಗಿಡದ ಎಲೆಗಳು ಹಾಗೂ ಕಾಯಿಗಳು ಸಂಪೂರ್ಣ ಹಳದಿ ಬಣ್ಣಕ್ಕೆ ತಿರುಗುತ್ತವೆ. ಹೂವು ಬಿಡುವಿಕೆ ಕಡಿಮೆಯಾಗುವುದರ ಜೊತೆಗೆ ಕಾಯಿಗಳಲ್ಲಿ ಕಾಳು ಕಟ್ಟದೆ ಇಳುವರಿ ಕುಂಠಿತವಾಗುವ ಸಾಧ್ಯತೆ ಇದೆ. ತೀವ್ರ ಬಾಧೆಯ ಸಂದರ್ಭದಲ್ಲಿ ಇಡೀ ಹೊಲವೇ ಹಳದಿ ಬಣ್ಣಕ್ಕೆ ತಿರುಗುವ ಸಾಧ್ಯತೆಯಿದೆ.

ಹಳದಿ ಮೊಸಾಯಿಕ್ ವೈರಸ್ ಸೋಯಾಬೀನ್, ಉದ್ದು ಹಾಗೂ ಹೆಸರು ಬೆಳೆಗಳಿಗೆ ಸೋಂಕು ಉಂಟು ಮಾಡುತ್ತದೆ. ಹೀಗಾಗಿ ಆರಂಭಿಕ ಹಂತದಲ್ಲಿಯೇ ರೋಗಬಾಧೆಯನ್ನು ಗುರುತಿಸಿ ನಿಯಂತ್ರಣ ಕ್ರಮ ಕೈಗೊಳ್ಳುವುದು ಅಗತ್ಯ ಎಂದು ವಿಜ್ಞಾನಿಗಳು ತಿಳಿಸಿದ್ದಾರೆ.

ರೋಗ ನಿರ್ವಹಣೆಗೆ ಸಲಹೆಗಳು: ಹಳದಿ ನಂಜು ರೋಗದಿಂದ ಬಾಧಿತ ಗಿಡಗಳನ್ನು ಹೊಲದಿಂದ ಕಿತ್ತು ಹೊರತೆಗೆದು ನಾಶಪಡಿಸಬೇಕು. ಪ್ರತಿ ಎಕರೆಗೆ 8ರಿಂದ 10 ಹಳದಿ ಅಂಟು ಬಲೆಗಳನ್ನು ಬೆಳೆಗಿಂತ ಸುಮಾರು ಒಂದು ಅಡಿ ಎತ್ತರದಲ್ಲಿ ಅಳವಡಿಸಬೇಕು.

ರಸಹೀರುವ ಕೀಟಗಳ ನಿಯಂತ್ರಣಕ್ಕಾಗಿ ಇಮಿಡಾಕ್ಲೋಪ್ರಿಡ್ ಅಥವಾ ಥಯಾಮೆಥಾಕ್ಸಮ್ 0.3 ಗ್ರಾಂ ಅಥವಾ ಅಸಿಫೇಟ್ 1 ಗ್ರಾಂ ಜೊತೆಗೆ ಸ್ಟಿಕ್ಕರ್ (ಅಂಟು) 1 ಮಿ.ಲೀ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು. ಇದರೊಂದಿಗೆ 19:19:19 ನೀರಿನಲ್ಲಿ ಕರಗುವ ರಸಗೊಬ್ಬರವನ್ನು 10 ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬಹುದು. ಇದೇ ಸಿಂಪರಣೆಯನ್ನು 15 ದಿನಗಳ ಬಳಿಕ ಮತ್ತೊಮ್ಮೆ ಕೈಗೊಳ್ಳಬೇಕು ಎಂದು ಸಲಹೆ ನೀಡಲಾಗಿದೆ.

ಸೋಯಾಬೀನ್ ಬೆಳೆಯಲ್ಲಿ ಕಾಯಿಕೊರಕ ಹಾಗೂ ಕಾಂಡಕೊರಕ ಹುಳುಗಳ ನಿಯಂತ್ರಣಕ್ಕಾಗಿ ಥಯಾಮೆಥಾಕ್ಸಮ್ 12.6% + ಲ್ಯಾಂಬ್ಡಾ ಸೈಹ್ಯಾಲೋಥ್ರಿನ್ 9.5% ಎಸ್‌ಸಿ ಕೀಟನಾಶಕವನ್ನು 16 ಲೀಟರ್ ಸಾಮರ್ಥ್ಯದ ಪಂಪ್‌ಗೆ 15ರಿಂದ 20 ಮಿ.ಲೀ. ಪ್ರಮಾಣದಲ್ಲಿ ಬೆರೆಸಿ ಸಿಂಪಡಿಸಬೇಕು.

ಇತರೆ ರಸಹೀರುವ ಕೀಟಗಳ ನಿಯಂತ್ರಣಕ್ಕೆ ಅಸಿಟಾಮಿಪ್ರಿಡ್ 20% ಎಸ್‌ಪಿ 2 ಗ್ರಾಂ ಪ್ರತಿ ಲೀಟರ್ ನೀರಿಗೆ ಹಾಗೂ 19:19:19 ನೀರಿನಲ್ಲಿ ಕರಗುವ ರಸಗೊಬ್ಬರವನ್ನು 10 ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸುವಂತೆ ಕೃಷಿ ವಿಜ್ಞಾನಿಗಳು ಸಲಹೆ ನೀಡಿದ್ದಾರೆ.

ಈ ಕುರಿತು ಕೃಷಿ ವಿಜ್ಞಾನ ಕೇಂದ್ರದ ಎ.ಇ.ಇ.ಸಿ. ಮುಂದಾಳು ಡಾ. ಆರ್.ಎಲ್. ಜಾಧವ ಅವರು ರೈತರಿಗೆ ಅಗತ್ಯ ಸಲಹೆಗಳನ್ನು ನೀಡಿದ್ದಾರೆ. ರೈತರು ರೋಗದ ಲಕ್ಷಣಗಳು ಕಂಡುಬಂದ ತಕ್ಷಣ ಸಮೀಪದ ಕೃಷಿ ಇಲಾಖೆ ಕಚೇರಿ ಅಥವಾ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳನ್ನು ಸಂಪರ್ಕಿಸಿ ಸೂಕ್ತ ಮಾರ್ಗದರ್ಶನ ಪಡೆದು ನಿಯಂತ್ರಣ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

ಶ್ರಾವಣ ಮಾಸದ ಅಂಗವಾಗಿ ಅಡವಿಸಿದ್ದೇಶ್ವರ ಪುರಾಣ

ಸಿರವಾರ.ಅ.11-

ಶ್ರಾವಣ ಮಾಸದ ಅಂಗವಾಗಿ ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಒಂದು ತಿಂಗಳ ಕಾಲ ಪುರಾಣ ಪ್ರವಚನವನ್ನು ಹಮ್ಮಿಕೊಳಲಾಗಿದೆ ಎಂದು ಈಶ್ವರ ದೇವಸ್ಥಾನದ ಅರ್ಚಕರು, ಆಡಳಿತ ಮಂಡಳಿಯರು ತಿಳಿಸಿದ್ದಾರೆ. ದಿನಾಂಕ 13-08-2026 ಗುರುವಾರ ಸಂಜೆ 6:30 ರಿಂದ ಪ್ರತಿದಿನ ಸಂಜೆ ಶಿವಯೋಗಿ ಸಿದ್ಧಿಯಿಂದ 777 ವರ್ಷ ಬಾಳಿದ ಮಹಾನ್ ತಪಸ್ವಿ ಅಂಕಲಗಿ ಶ್ರೀ ಅಡವಿಸಿದ್ದೇಶ್ವರ ಪುರಾಣ ಪ್ರಾರಂಭವಾಗಿತ್ತದೆ. ಶ್ರಾವಣ ಮಾಸದ ಅಂಗವಾಗಿ ಶ್ರೀ ಈಶ್ವರ ದೇವಸ್ಥಾನದಲ್ಲಿ ನಿತ್ಯ ರುದ್ರಾಭಿಷೇಕ ಹಾಗೂ ವಿಶೇಷ ಪೂಜೆ ಜರುಗುವುದು.

ದಿವ್ಯಸಾನಿಧ್ಯ ಶ್ರೀ ಷ.ಬ್ರ.ಡಾ. ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು ಬೃಹನ್ಮಠ ನೀಲಗಲ್-ಎನ್.ಗಣೇಕಲ್, ಶ್ರೀ ಷಬ್ರ ಬೂದಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಶ್ರೀ ಬೂದಿಬಸವೇಶ್ವರ ಸಂಸ್ಥಾನ ಮಠ ಗಬ್ಬೂರು

ನೇತೃತ್ವ ಪೂ. ಶ್ರೀ ಷಬ್ರ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಬೃಹನ್ಮಠ ನವಿಲಕಲ್ಲು, ಶ್ರೀ ಮ.ನಿ.ಪ್ರ. ಡಾ. ಅಮರಸಿದ್ದೇಶ್ವರ ಮಹಾಸ್ವಾಮಿಗಳು ಅಡವಿಸಿದ್ದೇಶ್ವರ ಮಠ ಅಂಕಲಗಿ-ಕುಂದರಗಿ ತಾ. ಗೋಕಾಕ, ಸಮ್ಮುಖ- ಶ್ರೀ ಷಬ್ರ ಅಭಿನವ ರಾಚೋಟಿವೀರ ಶಿವಾಚಾರ್ಯ ಮಹಾಸ್ವಾಮಿಗಳು ಸೋಮವಾರಪೇಟೆ ಹಿರೇಮಠ ಅತ್ತನೂರು-ರಾಯಚೂರು, ಶ್ರೀ ವೇ.ಮೂ.ದೇವೇಂದ್ರಯ್ಯ ಸ್ವಾಮಿಗಳು ಮಹಾಗುರುಮಠ ಸಿರವಾರ ತಿಳಿಸಿದ್ದಾರೆ.

ತ್ರಿವರ್ಣ ಧ್ವಜಗಳನ್ನು ಎಲ್ಲೆಂದರಲ್ಲಿ ಎಸೆಯಬೇಡಿ, ಧ್ವಜ ಸಂಹಿತೆ ಕಟ್ಟುನಿಟ್ಟಾಗಿ ಪಾಲಿಸಿ; ರಾಜ್ಯಗಳಿಗೆ ಕೇಂದ್ರದ ಸೂಚನೆ

ನವದೆಹಲಿ: ಸ್ವಾತಂತ್ರ್ಯ ದಿನಾಚರಣೆಗೆ ದಿನಗಣನೆ ಶುರುವಾಗಿದ್ದು, ಕೇಂದ್ರ ಸರ್ಕಾರ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಧ್ವಜ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕೇಂದ್ರ ಗೃಹ ಸಚಿವಾಲಯ ಸೂಚನೆ ಹೊರಡಿಸಿದೆ.

ಪ್ರಮುಖ ರಾಷ್ಟ್ರೀಯ, ಸಾಂಸ್ಕೃತಿಕ ಮತ್ತು ಕ್ರೀಡಾ ಕಾರ್ಯಕ್ರಮಗಳ ಸಂದರ್ಭದಲ್ಲಿ ಸಾಮಾನ್ಯ ಜನರು ಕಾಗದದ ಧ್ವಜಗಳನ್ನು ಕಾರ್ಯಕ್ರಮದ ಬಳಿಕ ನೆಲದ ಮೇಲೆ ಅಥವಾ ಎಲ್ಲೆಂದರಲ್ಲಿ ಎಸೆದು ಹೋಗದಂತೆ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿದೆ.

ಕೇಂದ್ರ ಗೃಹ ಸಚಿವಾಲಯದಿಂದ ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಕಳುಹಿಸಲಾದ ಸಂದೇಶದಲ್ಲಿ, ರಾಷ್ಟ್ರಧ್ವಜ ಪ್ರದರ್ಶನಕ್ಕೆ ಸಂಬಂಧಿಸಿದ ಕಾನೂನುಗಳು, ಕಾರ್ಯವಿಧಾನಗಳು ಮತ್ತು ಸಂಪ್ರದಾಯಗಳ ಬಗ್ಗೆ ಸಾರ್ವಜನಿಕರಲ್ಲಿ ಹಾಗೂ ಸರ್ಕಾರಿ ಸಂಸ್ಥೆಗಳು ಮತ್ತು ಏಜೆನ್ಸಿ ಗಳಲ್ಲಿ ಅರವಿನ ಕೊರತೆ ಕಂಡು ಬಂದಿದೆ. ಈ ನಿಟ್ಟಿನಲ್ಲಿ ಎಲೆಕ್ಟ್ರಾನಿಕ್ ಮತ್ತು ಮುದ್ರಣ ಮಾಧ್ಯಮಗಳಲ್ಲಿನ ಜಾಹೀರಾತುಗಳ ಮೂಲಕ ಅವುಗಳಿಗೆ ವ್ಯಾಪಕ ಪ್ರಚಾರ ನೀಡುವಂತೆ ಸೂಚಿಸಲಾಗಿದೆ.

ಭಾರತದ ರಾಷ್ಟ್ರಧ್ವಜವು ನಮ್ಮ ದೇಶದ ಜನರ ಆಶೋತ್ತರಗಳನ್ನು ಪ್ರತಿನಿಧಿಸುತ್ತದೆ. ಅದಕ್ಕೆ ಗೌರವಯುತ ಸ್ಥಾನವನ್ನು ನೀಡಬೇಕು ಎಂದು ಸಂದೇಶದಲ್ಲಿ ಕೇಂದ್ರ ಸರ್ಕಾರದ ಅಧೀನ ಕಾರ್ಯದರ್ಶಿ ಕಮಲೇಶ್ ರಬಿದಾಸ್ ತಿಳಿಸಿದ್ದಾರೆ.

ಧ್ವಜ ಸಂಹಿತೆ ಪ್ರಮುಖಾಂಶಗಳು: ರಾಷ್ಟ್ರಧ್ವಜವು ಕೈಯಿಂದ ನೂಲಲ್ಪಟ್ಟು, ಕೈಮಗ್ಗದಲ್ಲಿ ನೇಯಲ್ಪಟ್ಟಿರ'ಬೇಕು ಅಥವಾ ಯಂತ್ರದಿಂದ ತಯಾರಿಸಲ್ಪಟ್ಟಿರಬೇಕು. ಅವುಗಳನ್ನು ಹತ್ತಿ, ಪಾಲಿಯೆಸ್ಟರ್, ಉಣ್ಣೆ, ರೇಷ್ಮೆ ಅಥವಾ ಖಾದಿ ಬಂಟಿಂಗ್‌ನಿಂದ ತಯಾರಿಸಿರಬೇಕು.

2022ರ ಜುಲೈ 19ರಂದು ಹೊರಡಿಸಲಾದ 'ಭಾರತದ ಧ್ವಜ ಸಂಹಿತೆ, 2002' ಅನ್ನು ತಿದ್ದುಪಡಿ ಆದೇಶದ ಅನುಸಾರ, ಸಾರ್ವಜನಿಕರು, ಖಾಸಗಿ ಸಂಸ್ಥೆಗಳು ಅಥವಾ ಶಿಕ್ಷಣ ಸಂಸ್ಥೆಗಳು ರಾಷ್ಟ್ರಧ್ವಜದ ಘನತೆ ಮತ್ತು ಗೌರವಕ್ಕೆ ಅನುಗುಣವಾಗಿ ಯಾವುದೇ ಸಮಾರಂಭ ಅಥವಾ ಇತರ ಸಂದರ್ಭಗಳಲ್ಲಿ ಹಾಗೂ ಎಲ್ಲ ದಿನಗಳಲ್ಲೂ ರಾಷ್ಟ್ರಧ್ವಜವನ್ನು ಹಾರಿಸಬಹುದು.

ರಾಷ್ಟ್ರಧ್ವಜವನ್ನು ಹಾರಿಸಿದಾಗೆಲ್ಲ ಅದಕ್ಕೆ ಗೌರವಯುತ ಸ್ಥಾನವನ್ನು ನೀಡಬೇಕು. ಅದನ್ನು ಪ್ರತ್ಯೇಕವಾಗಿ ಹಾಗೂ ಸ್ಪಷ್ಟವಾಗಿ ಕಾಣುವಂತೆ ಇರಿಸಬೇಕು. ಹಾನಿಗೊಳಗಾದ ಅಥವಾ ಅಸ್ತವ್ಯಸ್ತಗೊಂಡ ಸ್ಥಿತಿಯಲ್ಲಿರುವ ಧ್ವಜವನ್ನು ಹಾರಿಸಬಾರದು. ಬೇರೇ ಯಾವುದೇ ಧ್ವಜಗಳೊಂದಿಗೆ ಒಂದೇ ಕಂಬದ ಮೇಲೆ ಏಕಕಾಲದಲ್ಲಿ ರಾಷ್ಟ್ರಧ್ವಜವನ್ನು ಹಾರಿಸಬಾರದು.

ಜೈವಿಕ ಇಂಧನ ಬಳಕೆಯಿಂದ ಪರಿಸರ ಮಾಲಿನ್ಯ ನಿಯಂತ್ರಣ ಸಾಧ್ಯ: ಸಾಗರ್ ತಾವಡೆ

ಕಲಬುರಗಿ,ಆ.11-

ಜೈವಿಕ ಇಂಧನದ ಬಳಕೆಗೆ ದೇಶದಲ್ಲಿ ಹೆಚ್ಚಿನ ಅವಕಾಶಗಳಿದ್ದು, ಪ್ರಸ್ತುತ ವಾಹನಗಳ ಇಂಧನ ಕ್ಷೇತ್ರದಲ್ಲಿಯೂ ಇದರ ವಾಣಿಜ್ಯ ಬಳಕೆ ಹೆಚ್ಚಾಗುತ್ತಿದೆ. ಪೆಟ್ರೋಲಿಯಂ ಉತ್ಪನ್ನಗಳ ಜೊತೆಗೆ ಜೈವಿಕ ಇಂಧನ ಬಳಕೆಗೆ ಕರ್ನಾಟಕದಲ್ಲಿ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತಿದ್ದು, ಇದರಿಂದ ವಾಯು ಮಾಲಿನ್ಯ ಕಡಿಮೆ ಮಾಡುವುದರೊಂದಿಗೆ ಪರಿಸರ ಸ್ನೇಹಿ ಸಾರಿಗೆ ವ್ಯವಸ್ಥೆ ಬೆಳೆಸಲು ಸಾಧ್ಯವಾಗಲಿದೆ ಎಂದು ಜಿಲ್ಲಾ ಜೈವಿಕ ಇಂಧನ ಉಸ್ತುವಾರಿ ಸಮಿತಿ ಸಮಾವೇಶಕ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಾಗರ್ ಎಸ್. ತಾವಡೆ ಹೇಳಿದರು.

ನಗರದ ಆಳಂದ ರಸ್ತೆಯ ಕೃಷಿ ಮಹಾವಿದ್ಯಾಲಯದಲ್ಲಿ ಸೋಮವಾರ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಜಿಲ್ಲಾ ಪಂಚಾಯತ್, ಕಲಬುರಗಿ, ಸಾಮಾಜಿಕ ಅರಣ್ಯ ವಿಭಾಗ, ಕೃಷಿ ಮಹಾವಿದ್ಯಾಲಯ ಹಾಗೂ ಸಹಾರಾ ಸೇವಾ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಜೈವಿಕ ಇಂಧನ ದಿನಾಚರಣೆ-2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಮಳೆಗಾಲದ ಅಧಿವೇಶನ ಮತ್ತು ಹೊಂದಾಣಿಕೆ ರಾಜಕಾರಣ

ಇಲ್ಲಿಯವರೆಗೆ ನಡೆದ ಅಧಿವೇಶನಗಳೆಲ್ಲವೂ ಆಡಳಿತ ಪಕ್ಷ ಮತ್ತು ವಿಪಕ್ಷಗಳ 'ಹೊಂದಾಣಿಕೆ ರಾಜಕಾರಣ'ಕ್ಕೆ ಬಲಿಯಾಗಿ ಇತಿಹಾಸ ಬರೆದಿವೆ. ಈ ಬಾರಿಯಾದರೂ ಅಧಿವೇಶನ ಜನರ ನೈಜ ಸಮಸ್ಯೆಗಳ ಚರ್ಚೆಗೆ ವೇದಿಕೆಯಾಗಲಿ.

ಆಗಸ್ಟ್ 13ರ ಗುರುವಾರದಿಂದ ಮಳೆಗಾಲದ ಅಧಿವೇಶನ ಆರಂಭವಾಗಲಿದೆ. ಈ ಅಧಿವೇಶನಕ್ಕೆ ಹಿರಿಯ ಕಾಂಗ್ರೆಸ್ ನಾಯಕ, ಶಿರಾ ಶಾಸಕ, ಮಾಜಿ ಸಚಿವ ಟಿ.ಬಿ. ಜಯಚಂದ್ರ ಹಂಗಾಮಿ ಸಭಾಧ್ಯಕ್ಷರಾಗಿ; ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಹಂಗಾಮಿ ಸಭಾಪತಿಯಾಗಿ ಆಯ್ಕೆಯಾಗಿದ್ದಾರೆ. 10 ದಿನಗಳ ಕಾಲ ನಡೆಯುವ ರಾಜ್ಯ ವಿಧಾನಮಂಡಲ ಅಧಿವೇಶನ, ಡಿ.ಕೆ. ಶಿವಕುಮಾರ್ ಅವರ ಪಾಲಿಗೆ ಮುಖ್ಯಮಂತ್ರಿಯಾಗಿ ಮೊದಲ ಅಧಿವೇಶನವಾಗಿದೆ.

ಮೊದಲ ಅಧಿವೇಶನದಲ್ಲಿಯೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸ್ವಪಕ್ಷ ಮತ್ತು ವಿಪಕ್ಷಗಳಿಂದ ಸಮಸ್ಯೆ ಮತ್ತು ಸವಾಲು ಎದುರಾಗಿದೆ. ಪ್ರಮಾಣವಚನ ಸ್ವೀಕರಿಸಿದ 19 ಹೊಸ ಸಚಿವರಿಗೆ ಖಾತೆ ಹಂಚಿಕೆಯಾಗದಿರುವುದು, ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಸ್ಥಾನ ಕಲ್ಪಿಸದಿರುವುದು, ಸಚಿವ ಸ್ಥಾನ ಸಿಗದ ಹಿರಿಯ ಶಾಸಕರಿಂದ ಬಂಡಾಯ ವ್ಯಕ್ತವಾಗುತ್ತಿರುವುದು- ಪಕ್ಷದೊಳಗಿನ ಬಿಕ್ಕಟ್ಟಾಗಿದೆ. ಹಾಗೆಯೇ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ವಿಧಾನಸಭೆಯ ಸಭಾಧ್ಯಕ್ಷ ಸ್ಥಾನಕ್ಕೆ ಸೂಕ್ತವಾದವರ ನೇಮಕ ಆಗದಿರುವುದು- ಸಾಂವಿಧಾನಿಕ ಸಮಸ್ಯೆ ಸೃಷ್ಟಿಗೆ ಕಾರಣವಾಗಿದೆ.

ಹಾಗೆಯೇ ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್‌ಗಳಿಂದ ಅಧಿವೇಶನಕ್ಕೆ ಪೂರ್ವತಯಾರಿಯಾಗಿ ಭಾನುವಾರವೇ ಬಿಡದಿಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆ(ಜಿಬಿಐಟಿ) ವಿರುದ್ಧ, ರೈತರ ಪರ ಪಾದಯಾತ್ರೆ ಮಾಡುವ ಮೂಲಕ ಸರ್ಕಾರದ ವಿರುದ್ಧ ರಣಕಹಳೆ ಮೊಳಗಿದೆ.

ವಿರೋಧ ಪಕ್ಷಗಳ ಪಾದಯಾತ್ರೆಯ ಬೆನ್ನಲ್ಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಡಿಯೋ ಸಂದೇಶವೊಂದನ್ನು ಹಂಚಿಕೊಂಡು, ಹಿಂದಿನ ಸರ್ಕಾರ ಎಕರೆಗೆ ಕೇವಲ 25 ಲಕ್ಷ ನಿಗದಿಪಡಿಸಿದ್ದರೆ, ನಮ್ಮ ಸರ್ಕಾರ ಪ್ರತಿ ಎಕರೆಗೆ 3 ಕೋಟಿಗೂ ಹೆಚ್ಚು ಪರಿಹಾರ ನೀಡಲು ತೀರ್ಮಾನಿಸಿದೆ. ಜೊತೆಗೆ ವಿಶ್ವದರ್ಜೆಯ ರಸ್ತೆಗಳು, ಮೆಟ್ರೊ ಸಂಪರ್ಕ, ಅತ್ಯಾಧುನಿಕ ಕ್ರೀಡಾಂಗಣ, ಉದ್ಯಾನವನ ಹಾಗೂ ಸುಸಜ್ಜಿತ ವಸತಿ ಒಳಗೊಂಡ ಅತ್ಯಾಧುನಿಕ ಐಟಿ ಸಿಟಿಯಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದಿರುವುದು ಬಿಡದಿ ಭಾಗದ ರೈತರನ್ನು ಕೆರಳಿಸಿದೆ.

ಅದರಲ್ಲೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಯವರು, ಆಗ ಬೇಡ ಎಂದಿದ್ದ ಶಿವಕುಮಾರ್, ಮುಖ್ಯಮಂತ್ರಿಯಾದ ಬಳಿಕ ಅತಿ ಕಾಳಜಿ ವಹಿಸುತ್ತಿದ್ದಾರೆ. ಯಾರಿಗೋ ಲಾಭ ಮಾಡಿಕೊಡಲು ಪ್ರಯತ್ನಿಸುತ್ತಿದ್ದಾರೆ. ಆಗ ಎಕರೆಗೆ 2 ಕೋಟಿ ಎಂದವರು, ಈಗ 3 ಕೋಟಿಗೂ ಹೆಚ್ಚು ಕೊಡುತ್ತೇವೆ ಎನ್ನುತ್ತಿದ್ದಾರೆ. ಯಾವ ಆಧಾರದ ಮೇಲೆ ಹೀಗೆ ಹೇಳುತ್ತಿದ್ದಾರೆ, ಇದೇನು ಚೌಕಾಸಿ ವ್ಯಾಪಾರವೇ ಎಂದಿರುವುದು ಸರ್ಕಾರದ ದ್ವಂದ್ವ ನಿಲುವನ್ನು, ಯೋಜನೆಯ ಹಿಂದಿರುವ ಹಿತಾಸಕ್ತಿಯನ್ನು ಬಯಲುಗೊಳಿಸಿದೆ.

ಇದರ ಜೊತೆಗೆ, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಾದ ಅಕ್ರಮ ಹಣ ವರ್ಗಾವಣೆ ಹಗರಣ ನ್ಯಾಯಾಲಯದಲ್ಲಿದ್ದರೂ, ಅವ್ಯವಹಾರ ಹಾಗೂ ಕ್ರಿಮಿನಲ್ ಸಂಚಿನಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಪ್ರಧಾನ ಪಾತ್ರ ವಹಿಸಿದ್ದಾರೆ ಎಂದು ಸಿಬಿಐ 2-6-2026 ರಂದು ಪ್ರಕಟಣೆ ಹೊರಡಿಸಿದ್ದರೂ, ಆಳುವ ಕಾಂಗ್ರೆಸ್ ಪಕ್ಷ ಅವರನ್ನು 3-8-2026ರಂದು ಮತ್ತೆ ಸಚಿವರನ್ನಾಗಿಸಿದೆ. ಇದು ರಾಜ್ಯ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು, ಸದನದ ಕಲಾಪವನ್ನು ಕಾವೇರಿಸಲು ಅತ್ಯುತ್ತಮ ಅವಕಾಶವಾಗಿ ವಿಪಕ್ಷಗಳಿಗೆ ಒದಗಿಬಂದಿದೆ.

ಇದಲ್ಲದೆ, ಮುಂಗಾರು ಮಳೆ ಸಕಾಲಕ್ಕೆ ಸುರಿಯದೆ ರಾಜ್ಯದಲ್ಲಿ ಬರ ಪರಿಸ್ಥಿತಿ ಉಂಟಾಗಿದೆ. ಬರಗಾಲವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದೆ, ಪರಿಹಾರಕ್ಕೆ ಮುಂದಾಗದೆ, ಜನರ ಕೈಗೆ ಕೆಲಸ ಕೊಡದೆ, ಉತ್ತರ ಕರ್ನಾಟಕದ ಹಲವು ಜಿಲ್ಲೆಗಳ ಜನ ಗುಳೆ ಹೋಗುತ್ತಿರುವುದು ಸಮಸ್ಯೆ ಸೃಷ್ಟಿಸಿದೆ. ಇದರ ನಡುವೆಯೇ ಅಲ್ಪಸ್ವಲ್ಪ ಸುರಿದ ಮಳೆಯಿಂದ ಕಬಿನಿ-ಕಾವೇರಿ ತುಂಬುತ್ತಿದೆ. ಆದರೆ, ಕಾವೇರಿ ಕೊಳ್ಳದ ರೈತರಿಗೆ ಬೆಳೆ ಬೆಳೆಯದಿರಲು ತಾಕೀತು ಮಾಡಿದ ಸರ್ಕಾರ, ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿದೆ. ಇದು ಸಹಜವಾಗಿಯೇ ಕಾವೇರಿ ಕೊಳ್ಳದ ರೈತರನ್ನು ರೊಚ್ಚಿಗೆಬ್ಬಿಸಿದೆ. ಇದು ಆಳುವ ಪಕ್ಷವನ್ನು ಹಣಿಯಲು ವಿರೋಧ ಪಕ್ಷಗಳಿಗೆ ಅನುಕೂಲ ಮಾಡಿಕೊಡಬಹುದು.

ಇನ್ನು ದೇಶದಾದ್ಯಂತ ಪರೀಕ್ಷಾ ಪದ್ಧತಿ, ಪ್ರಶ್ನೆ ಪತ್ರಿಕೆ ಸೋರಿಕೆ ಬಗ್ಗೆ ವಿದ್ಯಾರ್ಥಿಗಳು ಬೀದಿಗಿಳಿದು ಮಾಡಿದ ಹೋರಾಟಕ್ಕೆ ಗೆಲುವು ಸಿಕ್ಕಿದೆ. ಆ ವಿದ್ಯಾರ್ಥಿಗಳ ಪರವಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನಿಂತಿದ್ದಾರೆ. ಆದರೆ, ಅವರದೇ ಪಕ್ಷದ ಆಡಳಿತವಿರುವ ರಾಜ್ಯದಲ್ಲಿ, ಕೆಪಿಎಸ್‌ಸಿ ಕಳಂಕ ಮೆತ್ತಿಕೊಂಡಿದೆ. ಪ್ರಶ್ನೆ ಪತ್ರಿಕೆ ಸೋರಿಕೆ, ನೇಮಕಾತಿಯಲ್ಲಿ ಅಕ್ರಮ, ಭ್ರಷ್ಟಾಚಾರ, ಸ್ವಜನಪಕ್ಷಪಾತ ತಾರಕಕ್ಕೇರಿದೆ. ಉದ್ಯೋಗಾಕಾಂಕ್ಷಿಗಳು ಕೆಪಿಎಸ್‌ಸಿ ವಿರುದ್ಧ ಪ್ರತಿಭಟಿಸುತ್ತಿದ್ದಾರೆ. ಇದು ಕೂಡ ಸರ್ಕಾರಕ್ಕೆ ತಲೆನೋವಾಗಿ ಪರಿಣಮಿಸಿದೆ.

ಇದೆಲ್ಲದಕ್ಕೂ ಉತ್ತರ ನೀಡಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಿದ್ಧರಾಗಿದ್ದಾರೆಯೇ, ಅವರ ಸಹಾಯಕ್ಕೆ ಸಚಿವ ಸಂಪುಟ ನಿಲ್ಲಲಿದೆಯೇ ಎಂಬುದು ಸದ್ಯದ ಪ್ರಶ್ನೆಯಾಗಿದೆ. ಏಕೆಂದರೆ ಈಗ ಸಚಿವರಾಗಿರುವವರ ಪೈಕಿ ಶೇ. 75ರಷ್ಟು ಹೊಸಬರು. ಸಂಸದೀಯ ವ್ಯವಹಾರಗಳ ಬಗ್ಗೆ ಅರಿವಿಲ್ಲದವರು. ಅನನುಭವಿಗಳು. ಅದಕ್ಕಿಂತ ಕಾಂಗ್ರೆಸ್ಸಿನ ಹೆಚ್ಚಿನಪಾಲು ಸಚಿವರು ಜಡತ್ವಕ್ಕೆ ಅಂಟಿಕೊಂಡವರು. ಸುಲಭದ ಗೆಲುವಿಗೆ, ಸುಗಮ ಹಾದಿಗೆ ಹಾತೊರೆಯುವವರು. ಸಮಸ್ಯೆ ಎದುರಾದಾಗ, ಶಿವಕುಮಾರ್ ಅವರನ್ನು ಮುಂದೆ ಬಿಟ್ಟು ಹಿಂದೆ ನಿಲ್ಲುವವರು. ಶಿವಕುಮಾರ್ ಕೂಡ, ಅಧಿವೇಶನದಲ್ಲಿ ಚರ್ಚೆ ಮಾಡಲಿ, ಉತ್ತರಿಸುತ್ತೇನೆ ಎಂದಿದ್ದಾರೆ. ಅವರ ಈ ಹೇಳಿಕೆ ಉಡಾಫೆಯಂತೆ ಕಾಣುತ್ತಿದೆ ಎಂಬುದು ಸಾರ್ವಜನಿಕ ವಲಯದ ಅಭಿಪ್ರಾಯವಾಗಿದೆ.

ಈ ನಿಟ್ಟಿನಲ್ಲಿ ಮಳೆಗಾಲದ ಅಧಿವೇಶನ ಎನ್ನುವುದು ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಮತ್ತು ಸುರೇಶ್ ಬಾಬು ಅವರಿಗೆ, ನಾಡಿನ ಜನರ ಪರವಾಗಿ ಸದನದಲ್ಲಿ ಧ್ವನಿ ಎತ್ತಲು ಅಪೂರ್ವ ಅವಕಾಶ. ಈ ಅವಕಾಶವನ್ನು ಸಮರ್ಥವಾಗಿ ಬಳಸಿಕೊಂಡರೆ- ವಿರೋಧ ಪಕ್ಷಗಳು ಹೊಂದಾಣಿಕೆ ರಾಜಕಾರಣ ಎಂಬ ಕಳಂಕದಿಂದ ಮುಕ್ತವಾಗಬಹುದು. ಅಲ್ಲದೆ, ವಿಪಕ್ಷಗಳು ಎಂದರೆ ಸರ್ಕಾರದ ಪ್ರತಿ ನಡೆಯನ್ನೂ ವಿರೋಧಿಸಬೇಕು ಎಂದಲ್ಲ. ಸರ್ಕಾರ ಎಡವಿದಾಗ, ಕರ್ತವ್ಯ ನಿರ್ವಹಣೆಯಲ್ಲಿ ಲೋಪವಾದಾಗ ಎಚ್ಚರಿಸುವ ಕೆಲಸ ಮಾಡಬೇಕೇ ಹೊರತು ಘೋಷಣೆ, ಗದ್ದಲ, ಸಭಾತ್ಯಾಗವಲ್ಲ. ಆ ನಡವಳಿಕೆಯಿಂದ ಯಾವುದೇ ಪ್ರಯೋಜನವಿಲ್ಲ. ಇದನ್ನು ಅರಿತು ಪ್ರಾಮಾಣಿಕವಾಗಿ ವರ್ತಿಸಿದರೆ, ಜನರ ವಿಶ್ವಾಸ ಗಳಿಸಬಹುದು.

ಆಡಳಿತ ಮತ್ತು ವಿಪಕ್ಷ- ಯಾರೇ ಆದರೂ, ಪ್ರಜಾಸತ್ತಾತ್ಮಕವಾದ ಅತ್ಯುನ್ನತ ಮಟ್ಟದ ವಾಗ್ವಾದಕ್ಕೆ, ಹೇಳಿಕೆಗಳನ್ನು ದಾಖಲಿಸುವುದಕ್ಕೆ, ನಿಲುವುಗಳನ್ನು ವ್ಯಕ್ತಪಡಿಸುವುದಕ್ಕೆ, ನೀತಿಗಳ ಪರಿಶೀಲನೆಗೆ, ನಿರ್ದಿಷ್ಟ ವಿಚಾರಗಳ ಟೀಕೆಗೆ ಇರುವ ವೇದಿಕೆ ಸದನ ಎಂಬುದನ್ನು ಮೊದಲು ಅರಿಯಬೇಕಿದೆ. ಯಾವುದೇ ವಿಷಯದ ಬಗ್ಗೆ, ರಚನಾತ್ಮಕ ಮತ್ತು ಗುಣಾತ್ಮಕ ಚರ್ಚೆ ನಡೆಸಿದರೆ ಪರಿಹಾರದ ದಾರಿ ಸಿಕ್ಕೇ ಸಿಗುತ್ತದೆ. ಆಡಳಿತ ಪಕ್ಷ ಹಠಮಾರಿ ಧೋರಣೆ ತಳೆಯದೆ, ಪ್ರತಿಪಕ್ಷಗಳ ಮಾತನ್ನು ಸಂಯಮದಿಂದ ಆಲಿಸಬೇಕು ಮತ್ತು ಟೀಕೆ, ನ್ಯೂನತೆಗಳನ್ನು ರಚನಾತ್ಮಕವಾಗಿ ಸ್ವೀಕರಿಸಿ, ಸುಧಾರಣೆಗಳನ್ನು ಕಂಡುಕೊಳ್ಳಬೇಕು.

ದುರದೃಷ್ಟವಶಾತ್, ಇಲ್ಲಿಯವರೆಗೆ ನಡೆದ ಅಧಿವೇಶನಗಳೆಲ್ಲವೂ ಆಡಳಿತ ಪಕ್ಷ ಮತ್ತು ವಿಪಕ್ಷಗಳ ಹೊಂದಾಣಿಕೆ ರಾಜಕಾರಣಕ್ಕೆ ಬಲಿಯಾಗಿ ಇತಿಹಾಸ ಬರೆದಿವೆ. ಈ ಬಾರಿಯಾದರೂ ಅಧಿವೇಶನ ಜನರ ನೈಜ ಸಮಸ್ಯೆಗಳ ಚರ್ಚೆಗೆ ವೇದಿಕೆಯಾಗಲಿ. ಕನ್ನಡಿಗರ ತೆರಿಗೆ ಹಣ ಪೋಲಾಗದಂತೆ, ಅಧಿವೇಶನವನ್ನು ಹೆಚ್ಚು ಫಲಪ್ರದಗೊಳಿಸಲಿ. ಅದು ಜನಪ್ರತಿನಿಧಿಗಳ ಜವಾಬ್ದಾರಿಯಾಗಲಿ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಭಾರತದಲ್ಲಿ ಮೀಸಲಾತಿ ಮತ್ತು ಸಾಮಾಜಿಕ ನ್ಯಾಯ: ಕಟು ವಾಸ್ತವಗಳ ಒಂದು ವಿವರಣೆ

ವ್ಯಕ್ತಿಯ ಆರ್ಥಿಕ ಸ್ಥಿತಿ ಬದಲಾಗಬಹುದು, ಆದರೆ ಆತನ ಜಾತಿಯ ಗುರುತು ಸಮಾಜದಲ್ಲಿ ಎಂದೆಂದಿಗೂ ಬದಲಾಗುವುದಿಲ್ಲ. ಸಮಾಜದಲ್ಲಿ ನಡೆಯುವ ಮರ್ಯಾದೇಗೇಡು ಹತ್ಯೆಗಳು ಹಾಗೂ ಸಾಮಾಜಿಕ ಬಹಿಷ್ಕಾರಗಳು ಆರ್ಥಿಕ ಸ್ಥಿತಿಯನ್ನು ನೋಡಿ ನಡೆಯುವುದಿಲ್ಲ, ಬದಲಾಗಿ ಜಾತಿಯನ್ನು ನೋಡಿ ನಡೆಯುತ್ತವೆ. ಹೀಗಿರುವಾಗ ''ಮೀಸಲಾತಿ ರದ್ದುಗೊಳಿಸಿ'' ಅಥವಾ ''ಆದಾಯದ ಮೇಲೆ ನೀಡಿ'' ಎಂದು ವಾದಿಸುವುದು ದಲಿತರ ದೈನಂದಿನ ರಕ್ತ-ಕಣ್ಣೀರನ್ನು ನಗಣ್ಯಗೊಳಿಸುವ ಬಾಲಿಶತನವಾಗಿದೆ.

''ಮೀಸಲಾತಿ ಎಂಬುದು ಬಡತನ ನಿರ್ಮೂಲನ ಅಸ್ತ್ರವಲ್ಲ; ಅದು ಆಡಳಿತಾತ್ಮಕ ಅಧಿಕಾರ ಹಂಚಿಕೆ ಮತ್ತು ಶತಮಾನಗಳಿಂದ ಅನುಭವಿಸಿದ ಚಾರಿತ್ರಿಕ ಶೋಷಣೆಗೆ ಸಂವಿಧಾನದ ಮೂಲಕ ನೀಡಿದ ರಕ್ಷಣಾ ಕವಚ.''

ಭಾರತೀಯ ಸಮಾಜದಲ್ಲಿ ಮೀಸಲಾತಿಯ ಕುರಿತು ಚರ್ಚೆಗಳು ಬಂದಾಗಲೆಲ್ಲಾ, ''ಮೀಸಲಾತಿಯನ್ನು ಜಾತಿಯ ಆಧಾರದ ಮೇಲೆ ನೀಡುವ ಬದಲು ಆರ್ಥಿಕ ಸ್ಥಿತಿಯ ಆಧಾರದ ಮೇಲೆ ನೀಡಬೇಕು'' ಅಥವಾ ''ಮೀಸಲಾತಿಯಿಂದ ಅರ್ಹತೆಗೆ ಧಕ್ಕೆಯಾಗುತ್ತಿದೆ'' ಎಂಬ ವಾದಗಳು ಮುನ್ನೆಲೆಗೆ ಬರುತ್ತವೆ. ಆದರೆ, ಈ ವಾದಗಳು ಸಮಾಜದ ಕಟು ವಾಸ್ತವಗಳಾದ ಜಾತಿ ದೌರ್ಜನ್ಯ, ನಿರಂತರ ಹಿಂಸೆ ಮತ್ತು ಶೋಷಿತರ ಆತ್ಮಗೌರವದ ಮೇಲಿನ ದಾಳಿಯನ್ನು ಮುಚ್ಚಿಹಾಕುವ ಯತ್ನಗಳಾಗಿವೆ.

ಸಮಾಜದಲ್ಲಿ ಮಲ ಹೊರುವ ಪದ್ಧತಿ, ಒಳಚರಂಡಿ ಹಾಗೂ ಮಲದ ಗುಂಡಿಗೆ ಇಳಿದು ಸ್ವಚ್ಛಗೊಳಿಸುವುದು, ಚಪ್ಪಲಿ ಹೊಲೆಯುವುದು, ಪೌರಕಾರ್ಮಿಕರ ಕಸ ಗುಡಿಸುವ ಕೆಲಸ ಮತ್ತು ಜೀತ ಪದ್ಧತಿಯಂತಹ ಅತ್ಯಂತ ಕಠಿಣ ಹಾಗೂ ಜೀವಾಪಾಯದ ಕೆಲಸಗಳಲ್ಲಿ ಶೇ. 90ಕ್ಕಿಂತ ಹೆಚ್ಚು ಶೋಷಿತ ಸಮುದಾಯದವರೇ (ವಿಶೇಷವಾಗಿ ದಲಿತರು) ತೊಡಗಿಸಿಕೊಂಡಿದ್ದಾರೆ.

ಈ ಅಪಾಯಕಾರಿ ಕೆಲಸಗಳನ್ನು ಮಾಡಲು ಯಾವುದೇ ಸ್ಪರ್ಧಾತ್ಮಕ ಪರೀಕ್ಷೆ ಅಥವಾ ಮೆರಿಟ್ () ಪ್ರಶ್ನೆ ಎದುರಾಗುವುದಿಲ್ಲ ಮತ್ತು ಯಾವುದೇ ಅರ್ಹತಾ ಪತ್ರಗಳು ಬೇಕಾಗಿಲ್ಲ. ಆದರೆ, ಅದೇ ಸಮುದಾಯದ ವ್ಯಕ್ತಿ ಶಿಕ್ಷಣ ಪಡೆದು ದೇಶದ ನೀತಿ ರೂಪಿಸುವ ಐಎಎಸ್ () ಅಥವಾ ಐಪಿಎಸ್ () ಅಧಿಕಾರಿಯಾಗಲು ಮುಂದಾದಾಗ ಮಾತ್ರ ಮೀಸಲಾತಿ ಮತ್ತು ಅರ್ಹತೆಯ ಪ್ರಶ್ನೆ ತೀವ್ರವಾಗಿ ಮುನ್ನೆಲೆಗೆ ಬರುತ್ತದೆ. ಕೇಂದ್ರ ಸರ್ಕಾರದ ವರದಿಯ ಪ್ರಕಾರ, ಐಎಎಸ್ ಅಧಿಕಾರಿಗಳಲ್ಲಿ ಶೇ. 92 ಮತ್ತು ಐಪಿಎಸ್ ಅಧಿಕಾರಿಗಳಲ್ಲಿ ಶೇ. 90ರಷ್ಟು ಮಂದಿ ಸಾಮಾನ್ಯ ವರ್ಗದವರೇ ಆಗಿದ್ದು, ದಲಿತ, ಆದಿವಾಸಿ ಮತ್ತು ಒಬಿಸಿ ಪ್ರಾತಿನಿಧ್ಯ ಕೇವಲ ಶೇ. 8 ರಿಂದ 10ರ ಒಳಗೇ ಉಳಿದಿರುವುದು ಈ ತಾರತಮ್ಯಕ್ಕೆ ಕನ್ನಡಿ ಹಿಡಿಯುತ್ತದೆ.

ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ () ದತ್ತಾಂಶಗಳು ಭಾರತದಲ್ಲಿ ದಲಿತರು ಎದುರಿಸುತ್ತಿರುವ ನರಕಯಾತನೆಯನ್ನು ಸ್ಪಷ್ಟಪಡಿಸುತ್ತವೆ. 2020 ರಿಂದ 2022



ರ ಅವಧಿಯಲ್ಲಿ ಎಸ್‌ಸಿ ಮೇಲಿನ ಅಪರಾಧಗಳು 50,291 ರಿಂದ 57,582 ಕ್ಕೆ (ಶೇ. 14.50% ಏರಿಕೆ) ಹಾಗೂ ಎಸ್‌ಟಿ ಮೇಲಿನ ಅಪರಾಧಗಳು 8,272 ರಿಂದ 10,064 ಕ್ಕೆ (ಶೇ. 21.66% ಏರಿಕೆ) ಏರಿಕೆಯಾಗಿವೆ. ದೇಶದಲ್ಲಿ ಪ್ರತಿ 18 ನಿಮಿಷಕ್ಕೊಮ್ಮೆ ಒಬ್ಬ ದಲಿತನ ವಿರುದ್ಧ ಅಪರಾಧ ನಡೆಯುತ್ತಿದ್ದು, ಪ್ರತಿದಿನ 13 ದಲಿತರ ಕೊಲೆಯಾಗುತ್ತಿದೆ, ಪ್ರತಿ ವಾರ 5 ದಲಿತರ ಮನೆಗಳಿಗೆ ಬೆಂಕಿ ಇಡಲಾಗುತ್ತಿದೆ ಮತ್ತು 6 ದಲಿತರ ಅಪಹರಣವಾಗುತ್ತಿದೆ.

ವಿಶೇಷವಾಗಿ ದಲಿತ ಮಹಿಳೆಯರು ಜಾತಿ, ಲಿಂಗ ಮತ್ತು ಬಡತನ ಎಂಬ ಮೂರು ಹಂತದ ತಾರತಮ್ಯವನ್ನು ಏಕಕಾಲಕ್ಕೆ ಎದುರಿಸುತ್ತಿದ್ದಾರೆ. ಗ್ರಾಮೀಣ ಭಾರತದಲ್ಲಿ ಶೇ. 70ರಷ್ಟು ದಲಿತ ಮಹಿಳೆಯರು ಅಕ್ಷರಸ್ಥರಲ್ಲ. ಅತ್ಯಾಚಾರ ಮತ್ತು ದೈಹಿಕ ದೌರ್ಜನ್ಯಗಳು ಕೇವಲ ಕಾಮದ ಅಭಿವ್ಯಕ್ತಿಯಲ್ಲ, ಬದಲಿಗೆ ದಲಿತ ಸಮುದಾಯವನ್ನು ತಮ್ಮ ಗೆರೆ ದಾಟದಂತೆ ಹೆದರಿಸಿ ಅಧೀನತೆಯಲ್ಲಿಡುವ ದಮನಕಾರಿ ಅಸ್ತ್ರವಾಗಿ ಬಳಕೆಯಾಗುತ್ತಿವೆ. ಎಷ್ಟೋ ದೌರ್ಜನ್ಯಗಳು ಪೊಲೀಸ್ ಠಾಣೆಯ ಮೆಟ್ಟಿಲನ್ನೇ ಏರದೆ ಮುಚ್ಚಿಹೋಗುತ್ತಿರುವುದು ದುರಂತ.

ಮೂರರಲ್ಲಿ ಒಂದು ಗ್ರಾಮೀಣ ಶಾಲೆಗಳಲ್ಲಿ ದಲಿತ ಮಕ್ಕಳನ್ನು ಇತರ ಮಕ್ಕಳೊಂದಿಗೆ ಕುಳಿತುಕೊಳ್ಳಲು ಬಿಡುವುದಿಲ್ಲ. ಶೇ. 27.6ರಷ್ಟು ಹಳ್ಳಿಗಳಲ್ಲಿ ದಲಿತರಿಗೆ ಪೊಲೀಸ್ ಠಾಣೆ, ಗ್ರಾಮ ಪಂಚಾಯತ್ ಮತ್ತು ಸರ್ಕಾರಿ ಕಚೇರಿ ಪ್ರವೇಶಿಸುವುದಕ್ಕೂ ಅಡ್ಡಿಪಡಿಸಲಾಗುತ್ತಿದೆ.

ಪ್ರತಿ ನಾಲ್ಕು ಹಳ್ಳಿಗಳಲ್ಲಿ ಒಂದರಲ್ಲಿ ಆರೋಗ್ಯ ಸಿಬ್ಬಂದಿ ದಲಿತರ ಮನೆ ಬಾಗಿಲಿಗೆ ಹೋಗುವುದಿಲ್ಲ.

ಅರ್ಧದಷ್ಟು ಗ್ರಾಮಗಳಲ್ಲಿ ಸಾರ್ವಜನಿಕ ಕುಡಿಯುವ ನೀರಿನ ಮೂಲಗಳಿಗೆ ಪ್ರವೇಶವಿಲ್ಲ ಮತ್ತು ಶೇ. 70ರಷ್ಟು ಹಳ್ಳಿಗಳಲ್ಲಿ ಮೇಲ್ಜಾತಿ ಮತ್ತು ದಲಿತರು ಒಟ್ಟಿಗೆ ಕುಳಿತು ಊಟ ಮಾಡುವ ವಾತಾವರಣವಿಲ್ಲ.

ಅಂತರ್ಜಾತಿ ವಿವಾಹಗಳು ನಡೆದಾಗ ಮರ್ಯಾದೇಗೇಡು ಹತ್ಯೆಗಳು ನಡೆಯುತ್ತಿರುವುದು ನಮ್ಮ ಸಮಾಜದ ಮಣ್ಣುಮುಕ್ಕಿದ ಜಾತಿ ವ್ಯವಸ್ಥೆಯನ್ನು ಎತ್ತಿ ತೋರಿಸುತ್ತದೆ.

ವ್ಯಕ್ತಿಯ ಆರ್ಥಿಕ ಸ್ಥಿತಿ ಬದಲಾಗಬಹುದು, ಆದರೆ ಆತನ ಜಾತಿಯ ಗುರುತು ಸಮಾಜದಲ್ಲಿ ಎಂದೆಂದಿಗೂ ಬದಲಾಗುವುದಿಲ್ಲ. ಸಮಾಜದಲ್ಲಿ ನಡೆಯುವ ಮರ್ಯಾದೇಗೇಡು ಹತ್ಯೆಗಳು ಹಾಗೂ ಸಾಮಾಜಿಕ ಬಹಿಷ್ಕಾರಗಳು ಆರ್ಥಿಕ ಸ್ಥಿತಿಯನ್ನು ನೋಡಿ ನಡೆಯುವುದಿಲ್ಲ, ಬದಲಾಗಿ ಜಾತಿಯನ್ನು ನೋಡಿ ನಡೆಯುತ್ತವೆ. ಹೀಗಿರುವಾಗ ''ಮೀಸಲಾತಿ ರದ್ದುಗೊಳಿಸಿ'' ಅಥವಾ ''ಆದಾಯದ ಮೇಲೆ ನೀಡಿ'' ಎಂದು ವಾದಿಸುವುದು ದಲಿತರ ದೈನಂದಿನ ರಕ್ತ-ಕಣ್ಣೀರನ್ನು ನಗಣ್ಯಗೊಳಿಸುವ ಬಾಲಿಶತನವಾಗಿದೆ.

ಸಂವಿಧಾನ ನೀಡಿದ ಮೀಸಲಾತಿಯು ಶೋಷಿತರ ಉಸಿರು ಮತ್ತು ಪ್ರಜಾಪ್ರಭುತ್ವದ ಅಸ್ತಿತ್ವಕ್ಕೆ ಅತ್ಯಗತ್ಯವಾದ ಸಾಮಾಜಿಕ ನ್ಯಾಯದ ಹಕ್ಕಾಗಿದೆ. ಈ ವ್ಯವಸ್ಥೆಯಲ್ಲಿ ಇತರ ಹಿಂದುಳಿದ ವರ್ಗಗಳಿಗೆ (), ಮಹಿಳೆಯರಿಗೆ, ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ, ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ () ಹಾಗೂ ವಿವಿಧ ಪ್ರಾದೇಶಿಕ ಮತ್ತು ವೃತ್ತಿಪರ ವರ್ಗಗಳಿಗೆ ಮೀಸಲಾತಿಯನ್ನು ಕಲ್ಪಿಸಲಾಗಿದೆ. ಆದ್ದರಿಂದ ಮೀಸಲಾತಿಯನ್ನು ಪ್ರಶ್ನಿಸುವ ಮುಂಚೆ ಶತಮಾನಗಳ ಚಾರಿತ್ರಿಕ ಅನ್ಯಾಯ ಮತ್ತು ಸಮಾಜದ ಕ್ರೂರ ಜಾತಿ ಪದ್ಧತಿಯನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ.

ಪುರುಷ ಪ್ರಾಬಲ್ಯದ ಕೋಟೆಗೆ ಲಗ್ಗೆ ಇಟ್ಟು ಇತಿಹಾಸ ಬರೆದ ನಾಲ್ವರು ಮಹಿಳೆಯರು..

ದಶಕಗಳ ಕಾಲ ಪುರುಷ ಪ್ರಾಬಲ್ಯದಲ್ಲಿದ್ದ ಉನ್ನತ ಹುದ್ದೆಗಳ ಬಾಗಿಲುಗಳು ಇಂದು ಮಹಿಳೆಯರಿಗೂ ತೆರೆದುಕೊಳ್ಳುತ್ತಿವೆ. 2026ರಲ್ಲಿ ವರ್ಷಾ ಅಗ್ಲಾವೆ, ಸ್ಕ್ವಾಡ್ರನ್ ಲೀಡರ್ ಭಾವನಾ ಕಾಂತ್, ಕ್ಯಾಪ್ಟನ್ ಶಿವಾನಿ ಸೆಹ್ರಾವತ್ ಮತ್ತು ನ್ಯಾಯಮೂರ್ತಿ ಅಭಾ ನಾಯರ್ ಪಟೇಲ್ ತಮ್ಮ ತಮ್ಮ ಕ್ಷೇತ್ರಗಳಲ್ಲಿ ಹೊಸ ಇತಿಹಾಸ ನಿರ್ಮಿಸಿದ್ದಾರೆ. ವಿಜ್ಞಾನ, ಸೇನೆ, ಯುದ್ಧವಿಮಾನ ಹಾಗೂ ನ್ಯಾಯಾಂಗದಂತಹ ಕ್ಷೇತ್ರಗಳಲ್ಲಿ ಪುರುಷ ಪ್ರಾಬಲ್ಯದ ಸರಹದ್ದುಗಳನ್ನ ಒದ್ದು ಮೇಲೇರಿದ ಅವರ ಸಾಧನೆಗಳು ಮಹಿಳಾ ನಾಯಕತ್ವದ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿವೆ.

1851ರಲ್ಲಿ ಸ್ಥಾಪನೆಯಾದ ಭಾರತದ ಜಿಯಾಲಾಜಿಕಲ್ ಸರ್ವೆ ಆಫ್ ಇಂಡಿಯಾ () ದೇಶದ ಅತ್ಯಂತ ಹಳೆಯ ಹಾಗೂ ಪ್ರತಿಷ್ಠಿತ ವೈಜ್ಞಾನಿಕ ಸಂಸ್ಥೆಗಳಲ್ಲಿ ಒಂದು. ಭಾರತದ ಭೂವೈಜ್ಞಾನಿಕ ನಕ್ಷೆ ತಯಾರಿಸುವುದು, ಖನಿಜ ಸಂಪನ್ಮೂಲಗಳ ಅನ್ವೇಷಣೆ, ಭೂಕಂಪ ಮತ್ತು ಭೂಸಂಪನ್ಮೂಲಗಳ ಅಧ್ಯಯನ ಸೇರಿದಂತೆ ಹಲವು ಪ್ರಮುಖ ಜವಾಬ್ದಾರಿಗಳನ್ನು ಈ ಸಂಸ್ಥೆ ನಿರ್ವಹಿಸುತ್ತದೆ. ಇಂತಹ 176 ವರ್ಷಗಳ ಇತಿಹಾಸ ಹೊಂದಿರುವ ಸಂಸ್ಥೆಯ ಅತ್ಯುನ್ನತ ಹುದ್ದೆಗೆ ಇಲ್ಲಿವರೆಗೆ ಮಹಿಳೆಯೊಬ್ಬರು ನೇಮಕವಾಗಿರಲಿಲ್ಲ.

ಈ ಸಂಪ್ರದಾಯಕ್ಕೆ ತೆರೆ ಎಳೆದವರು ವರ್ಷಾ ಅಶೋಕ್ ಅಗ್ಲವೆ. 2026ರ ಆಗಸ್ಟ್ 3ರಂದು ಅವರು ಯ 54ನೇ ಮಹಾನಿರ್ದೇಶಕರಾಗಿ ( ) ಅಧಿಕಾರ ಸ್ವೀಕರಿಸುವ ಮೂಲಕ ಸಂಸ್ಥೆಯ ಮೊದಲ ಮಹಿಳಾ ಮುಖ್ಯಸ್ಥೆಯಾಗಿ ಇತಿಹಾಸ ನಿರ್ಮಿಸಿದರು.

ಅಗ್ಲಾವೆ ಅಧಿಕಾರಿ ಮಾತ್ರವಲ್ಲ, ಅವರು ಅನುಭವಿ ಭೂವಿಜ್ಞಾನಿ. ವಿಶೇಷವಾಗಿ ಪ್ಯಾಲಿಯೊಂಟಾಲಜಿ () ಕ್ಷೇತ್ರದಲ್ಲಿ, ಅದರಲ್ಲೂ ಡೈನೋಸಾರ್‌ಗಳ ಜೀವನಶೈಲಿ, ವರ್ತನೆ ಹಾಗೂ ಗೂಡು ನಿರ್ಮಾಣದ ಕುರಿತ ಸಂಶೋಧನೆಗಳಲ್ಲಿ ಅವರು ಪರಿಣಿತಿ ಹೊಂದಿದ್ದಾರೆ. ಯ ವಿವಿಧ ವೈಜ್ಞಾನಿಕ ಮತ್ತು ಆಡಳಿತಾತ್ಮಕ ಹುದ್ದೆಗಳಲ್ಲಿ ಹಲವು ವರ್ಷಗಳ ಸೇವೆ ಸಲ್ಲಿಸಿದ ಬಳಿಕ ಸಂಸ್ಥೆಯ ಅತ್ಯುನ್ನತ ಸ್ಥಾನಕ್ಕೇರಿದ್ದಾರೆ.

ಭಾರತದ ಅತ್ಯಂತ ಹಳೆಯ ವೈಜ್ಞಾನಿಕ ಸಂಸ್ಥೆಯ ಚುಕ್ಕಾಣಿ ಮೊದಲ ಬಾರಿಗೆ ಮಹಿಳೆಯ ಕೈ ಸೇರಿದ ಮಹತ್ವದ ಮೈಲಿಗಲ್ಲು ಇದಾಗಿದೆ. ದಶಕಗಳಿಂದ ಪುರುಷರ ಪ್ರಾಬಲ್ಯದಲ್ಲಿದ್ದ ಭಾರತದ ಪ್ರಮುಖ ವೈಜ್ಞಾನಿಕ ಸಂಸ್ಥೆಯ ನಾಯಕತ್ವ ವಹಿಸಿಕೊಂಡಿದ್ದಾರೆ. ಸಾಮರ್ಥ್ಯ ಮತ್ತು ಪರಿಣತಿ ಲಿಂಗವನ್ನು ಮೀರಿ ಗುರುತಿಸಲ್ಪಡುತ್ತಿದೆ ಎಂಬುದಕ್ಕೆ ಇದು ಮಹತ್ವದ ಉದಾಹರಣೆ.

ಸ್ಕ್ವಾಡ್ರನ್ ಲೀಡರ್ ಭಾವನಾ ಕಾಂತ್: ಭಾರತದ ಮೊದಲ ಮಹಿಳಾ ಟಾಪ್ ಗನ್

ಭಾರತೀಯ ವಾಯುಪಡೆಯ ಇತಿಹಾಸದಲ್ಲಿ ಮಹಿಳೆಯರ ಹೆಸರನ್ನು ಚಿನ್ನದ ಅಕ್ಷರಗಳಲ್ಲಿ ಬರೆದವರಲ್ಲಿ ಸ್ಕ್ವಾಡ್ರನ್ ಲೀಡರ್ ಭಾವನಾ ಕಾಂತ್ ಪ್ರಮುಖರು. 1992ರ ಡಿಸೆಂಬರ್ 1ರಂದು ಜನಿಸಿದ ಭಾವನಾ, ಬೆಂಗಳೂರಿನ ಬಿಎಂಎಸ್ ಕಾಲೇಜ್ ಆಫ್ ಎಂಜಿನಿಯರಿಂಗ್ನಲ್ಲಿ ಮೆಡಿಕಲ್ ಎಲೆಕ್ಟ್ರಾನಿಕ್ಸ್ ಪದವಿ ಪಡೆದರು. ನಂತರ ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ () ನಲ್ಲಿ ಇಂಜಿನಿಯರ್ ಆಗಿ ಕೆಲಸ ಮಾಡಿದರು. 2016ರಲ್ಲಿ ಭಾರತೀಯ ವಾಯುಪಡೆಯು ಮೊದಲ ಬಾರಿಗೆ ಮಹಿಳೆಯರನ್ನು ಫೈಟರ್ ಸ್ಟ್ರೀಮ್‌ಗೆ ಸೇರಿಸಿಕೊಂಡಾಗ, ಅವಾನಿ ಚತುರ್ವೇದಿ, ಮೋಹನಾ ಸಿಂಗ್ ಹಾಗೂ ಭಾವನಾ ಕಾಂತ್ ಮೊದಲ ಬ್ಯಾಚ್‌ನ ಭಾಗವಾಗಿದ್ದರು. ಇದು ಭಾರತೀಯ ಸೇನಾ ಇತಿಹಾಸದ ಮಹತ್ವದ ತಿರುವಾಗಿತ್ತು.

ನಂತರ ಭಾವನಾ ಮಿಗ್-21 ಬೈಸನ್ ಯುದ್ಧವಿಮಾನವನ್ನು ಯಶಸ್ವಿಯಾಗಿ ಹಾರಿಸಿದರು. 2019ರಲ್ಲಿ ಅವರು ಹಗಲಿನ ಯುದ್ಧ ಕಾರ್ಯಾಚರಣೆಗಳಿಗೆ ( ) ಅರ್ಹತೆ ಪಡೆದ ಮೊದಲ ಮಹಿಳಾ ಫೈಟರ್ ಪೈಲಟ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಈ ಸಾಧನೆಗಾಗಿ



2020ರಲ್ಲಿ ಅವರಿಗೆ ನಾರಿ ಶಕ್ತಿ ಪುರಸ್ಕಾರವೂ ಲಭಿಸಿತು.

ಅವರ ಸಾಧನೆ ಅಲ್ಲಿಗೇ ನಿಲ್ಲಲಿಲ್ಲ. 2026ರಲ್ಲಿ ಭಾರತೀಯ ವಾಯುಪಡೆಯ ಅತ್ಯಂತ ಕಠಿಣ ತರಬೇತಿಗಳಲ್ಲಿ ಒಂದಾದ ಫೈಟರ್ ಕಾಂಬ್ಯಾಟ್ ಲೀಡರ್ () ಕೋರ್ಸ್ ಅನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಮೊದಲ ಮಹಿಳಾ ಪೈಲಟ್ ಎನಿಸಿಕೊಂಡರು. ಈ ತರಬೇತಿ ಯುದ್ಧ ಕಾರ್ಯಾಚರಣೆಗಳಿಗೆ ನಾಯಕತ್ವ ವಹಿಸುವ ಹಾಗೂ ವೈಮಾನಿಕ ತಂತ್ರಗಳನ್ನು ರೂಪಿಸುವ ಪೈಲಟ್‌ಗಳಿಗೆ ಮಾತ್ರ ನೀಡಲಾಗುತ್ತದೆ. ಅದರಿಂದಲೇ ಭಾವನಾ ಕಾಂತ್ ಅವರನ್ನು ಭಾರತದ ಮೊದಲ ಮಹಿಳಾ ಟಾಪ್ ಗನ್ ಎಂದೂ ಕರೆಯಲಾಗುತ್ತದೆ.

ಭಾರತೀಯ ಸೇನೆಯಲ್ಲಿ ಮಹಿಳೆಯರ ಪಾತ್ರ ದಿನದಿಂದ ದಿನಕ್ಕೆ ವಿಸ್ತರಿಸುತ್ತಿದೆ. ಈ ಬದಲಾವಣೆಯ ಮತ್ತೊಂದು ಮಹತ್ವದ ಮೈಲಿಗಲ್ಲು ಕ್ಯಾಪ್ಟನ್ ಶಿವಾನಿ ಸೆಹ್ರಾವತ್. ಅವರು ಭಾರತೀಯ ಸೇನಾ ಮುಖ್ಯಸ್ಥರ ( ) ಎಯ್ಡ್-ಡಿ-ಕ್ಯಾಂಪ್ () ಆಗಿ ನೇಮಕಗೊಂಡ ಮೊದಲ ಮಹಿಳಾ ಅಧಿಕಾರಿ.

ಹುದ್ದೆಯನ್ನು ಹಲವರು ಕೇವಲ ಔಪಚಾರಿಕ ಹುದ್ದೆ ಎಂದು ಭಾವಿಸುತ್ತಾರೆ. ಆದರೆ ವಾಸ್ತವದಲ್ಲಿ ಈ ಅಧಿಕಾರಿಯು ಸೇನಾ ಮುಖ್ಯಸ್ಥರ ಅಧಿಕೃತ ಕಾರ್ಯಕ್ರಮಗಳು, ಆಡಳಿತಾತ್ಮಕ ಕಾರ್ಯಗಳು, ಸಭೆಗಳು, ಭದ್ರತಾ ಸಮನ್ವಯ ಹಾಗೂ ಹಲವು ಪ್ರಮುಖ ಜವಾಬ್ದಾರಿಗಳಲ್ಲಿ ನೇರವಾಗಿ ನೆರವಾಗುತ್ತಾರೆ. ಈ ಹುದ್ದೆಗೆ ಅತ್ಯುತ್ತಮ ಸೇವಾ ದಾಖಲೆ ಹೊಂದಿರುವ ಅಧಿಕಾರಿಗಳನ್ನು ಮಾತ್ರ ಆಯ್ಕೆ ಮಾಡಲಾಗುತ್ತದೆ. ಇದುವರೆಗೆ ಈ ಜವಾಬ್ದಾರಿ ಪುರುಷ ಅಧಿಕಾರಿಗಳ ಪಾಲಾಗುತ್ತಿತ್ತು. ಈಗ ಮೊದಲ ಬಾರಿಗೆ ಮಹಿಳೆಯೊಬ್ಬರು ಈ ಸ್ಥಾನ ಅಲಂಕರಿಸಿರುವುದು ಭಾರತೀಯ ಸೇನೆಯಲ್ಲಿ ಮಹಿಳೆಯರ ಮೇಲಿನ ವಿಶ್ವಾಸ ಹೆಚ್ಚುತ್ತಿರುವುದನ್ನು ಪ್ರತಿಬಿಂಬಿಸುತ್ತದೆ. ಕ್ಯಾಪ್ಟನ್ ಶಿವಾನಿಯ ಅವರ ನೇಮಕವೇ ಭಾರತೀಯ ಸೇನೆಯ ಇತಿಹಾಸದಲ್ಲಿ ಮಹತ್ವದ ತಿರುವಾಗಿ ದಾಖಲಾಗಿದೆ.

ನ್ಯಾಯಮೂರ್ತಿ ಅಭಾ ನಾಯರ್ ಪಟೇಲ್ ಅವರ ಸಾಧನೆ ಭಾರತ ಮತ್ತು ಜಾಂಬಿಯಾ ನಡುವಿನ ವಿಶಿಷ್ಟ ನ್ಯಾಯಾಂಗ ಪಯಣದ ಪ್ರತೀಕ. 1966ರ ಏಪ್ರಿಲ್ 24ರಂದು ಜನಿಸಿದ ಅವರು ಬಾಲ್ಯದ ಒಂದು ಭಾಗವನ್ನು ದೆಹಲಿಯಲ್ಲಿ ಕಳೆದರು. 1973ರಲ್ಲಿ ಅವರ ಕುಟುಂಬ ಜಾಂಬಿಯಾಕ್ಕೆ ವಲಸೆ ಹೋಯಿತು.

ಅವರು ಜಾಂಬಿಯಾ ವಿಶ್ವವಿದ್ಯಾಲಯದಿಂದ ಎಲ್‌ಎಲ್‌ಬಿ ಪದವಿ ಹಾಗೂ ನಂತರ ಬ್ರಿಟನ್‌ನ ಪ್ರತಿಷ್ಠಿತ ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಿಂದ ಎಲ್‌ಎಲ್‌ಎಂ ಪದವಿ ಪಡೆದರು.

1989ರಲ್ಲಿ ಜಾಂಬಿಯಾದಲ್ಲಿ ವಕೀಲರಾಗಿ ನೋಂದಾಯಿಸಿಕೊಂಡ ಅವರು, ಬಳಿಕ ಇಂಗ್ಲೆಂಡ್ ಮತ್ತು ವೇಲ್ಸ್‌ನ ಸುಪ್ರೀಂ ಕೋರ್ಟ್‌ನ ಸಾಲಿಸಿಟರ್ ಆಗಿಯೂ ಅರ್ಹತೆ ಪಡೆದರು. ಹಲವು ವರ್ಷಗಳ ವಕಾಲತ್ತಿನ ಅನುಭವದ ಬಳಿಕ 2023ರಲ್ಲಿ ಜಾಂಬಿಯಾ ಕೋರ್ಟ್ ಆಫ್ ಅಪೀಲ್‌ಗೆ ಬಡ್ತಿ ಪಡೆದರು 2026ರ ಮೇ 27ರಂದು ದೂರದ ದಕ್ಷಿಣ ಆಫ್ರಿಕಾದ ಜಾಂಬಿಯಾ ದೇಶದ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಯಾಗಿ ನೇಮಕಗೊಂಡರು.

ಅವರು ಮಧ್ಯಸ್ಥಿಕೆ ತಜ್ಞೆಯೂ ಆಗಿದ್ದು, ಚಾರ್ಟರ್ಡ್ ಇನ್‌ಸ್ಟಿಟ್ಯೂಟ್ ಆಫ್ ಆರ್ಬಿಟ್ರೇಟರ್ಸ್‌ನ ಫೆಲೋ ಹಾಗೂ ಜಾಂಬಿಯಾ ಮಹಿಳಾ ನ್ಯಾಯಮೂರ್ತಿಗಳ ಸಂಘದ ಸದಸ್ಯೆಯೂ ಆಗಿದ್ದಾರೆ. 2026ರಲ್ಲಿ ಭಾರತದ ಸುಪ್ರೀಂ ಕೋರ್ಟ್‌ನ ನ್ಯಾಯಪೀಠದಲ್ಲಿ ವಿಶೇಷ ಆಹ್ವಾನಿತ ನ್ಯಾಯಮೂರ್ತಿಯಾಗಿ ಭಾಗವಹಿಸುವ ಅವಕಾಶ ಪಡೆದ ಮೊದಲ ಜಾಂಬಿಯಾ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಎಂಬ ಹೆಗ್ಗಳಿಕೆಯೂ ಅವರಿಗೆ ಲಭಿಸಿದೆ.

ವರ್ಷಾ ಅಗ್ಲವೆ, ಭಾವನಾ ಕಾಂತ್, ಶಿವಾನಿ ಸೆಹ್ರಾವತ್, ಅಭಾ ನಾಯರ್ ಪಟೇಲ್.. ನಾಲ್ಕು ಹೆಸರುಗಳು, ನಾಲ್ಕು ವಿಭಿನ್ನ ಕ್ಷೇತ್ರಗಳು, ನಾಲ್ಕು ಮಹತ್ವದ ಮೈಲಿಗಲ್ಲುಗಳು. ವಿಜ್ಞಾನ ಸಂಸ್ಥೆಯ ಅತ್ಯುನ್ನತ ಹುದ್ದೆಯಿಂದ ಯುದ್ಧವಿಮಾನದ ಕಾಕ್‌ಪಿಟ್‌ವರೆಗೆ, ಸೇನಾ ಮುಖ್ಯಸ್ಥರ ಕಚೇರಿಯಿಂದ ಸುಪ್ರೀಂ ಕೋರ್ಟ್ ನ್ಯಾಯಪೀಠದವರೆಗೆ ಈ ಮಹಿಳೆ ಶಕ್ತಿಗಳು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿವೆ. ಆದರೆ ಸ್ವಾತಂತ್ರ್ಯ ಪಡೆದು ಎಂಟು ದಶಕಗಳು ಸಮೀಪಿಸುತ್ತಿದ್ದರೂ ನಾವಿನ್ನೂ ಮೊದಲ ಮಹಿಳೆ ಎಂದೇ ಬರೆಯುತ್ತಿದ್ದೇವೆ.

ಇದಕ್ಕೆ ಮಹಿಳೆಯರಲ್ಲಿ ಸಾಮರ್ಥ್ಯ ಅಥವಾ ಅರ್ಹತೆಯ ಕೊರತೆ ಖಂಡಿತ ಅಲ್ಲ. ದಶಕಗಳ ಕಾಲ ಅವಕಾಶ, ಪ್ರಾತಿನಿಧ್ಯ ಮತ್ತು ನಿರ್ಧಾರ ಕೈಗೊಳ್ಳುವ ಸ್ಥಾನಗಳಲ್ಲಿ ಅವರಿಗೆ ಸಮಾನ ಅವಕಾಶ ಸಿಗದಿರುವುದೇ ಮುಖ್ಯ ಕಾರಣ. ಮೊದಲ ಮಹಿಳೆ ಎಂಬ ಸಾಧನೆಯನ್ನು ಸಂಭ್ರಮಿಸುವಂತೆ, ಇಂದಿಗೂ ಉಳಿದುಕೊಂಡಿರುವ ಲಿಂಗ ಅಸಮಾನತೆಯನ್ನು ಕಿತ್ತೊಗೆಯುವ ದೃಢ ನಿಶ್ಚಯವನ್ನೂ ಮಾಡಬೇಕಿದೆ. ಒಂದು ದಿನ ವಿಜ್ಞಾನ ಸಂಸ್ಥೆಯ ಮುಖ್ಯಸ್ಥೆ, ಫೈಟರ್ ಪೈಲಟ್, ಉನ್ನತ ಸೇನಾ ಅಧಿಕಾರಿ ಅಥವಾ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಯಾಗಿ ಮಹಿಳೆಯೊಬ್ಬರು ನೇಮಕವಾಗುವುದು ಇತಿಹಾಸವಾಗದೆ ಸಹಜ ಸುದ್ದಿಯಾಗಬೇಕು. ಅಂದು ಮೊದಲ ಮಹಿಳೆ ಎಂಬ ವಿಶೇಷಣದ ಅಗತ್ಯವೇ ಇರುವುದಿಲ್ಲ. ಬಹುಶಃ ಅದೇ ಈ ಸಾಧನೆಗಳ ನಿಜವಾದ ಗೆಲುವಾಗಬಹುದು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR